## 2025 ರ ಕರ್ನಾಟಕ ಅಧಿನಿಯಮ ಸಂಖ್ಯೆ: 04

## ಬಸವನಬಾಗೇವಾಡಿ ಅಭಿವೃದ್ಧಿ ಪ್ರಾಧಿಕಾರ ಅಧಿನಿಯಮ, 2024

### ಪ್ರಕರಣಗಳ ಪಟ್ಟಿ

ಪ್ರಕರಣಗಳು


1. ಸಂಕ್ಷಿಪ್ತ ಹೆಸರು, ವ್ಯಾಪ್ತಿ ಮತ್ತು ಪ್ರಾರಂಭ
2. ಪರಿಭಾಷೆಗಳು
3. ಬಸವನಬಾಗೇವಾಡಿ ಅಭಿವೃದ್ಧಿ ಪ್ರಾಧಿಕಾರ
4. ಪದಾವಧಿ ಮತ್ತು ಸೇವಾ ಷರತ್ತುಗಳು
5. ಸದಸ್ಯತ್ವಕ್ಕೆ ಅನರ್ಹತೆಗಳು
6. ಸದಸ್ಯರನ್ನು ತೆಗೆದು ಹಾಕುವುದು
7. ಮರು ನೇಮಕಾತಿಗೆ ಅರ್ಹತೆ
8. ಪ್ರಾಧಿಕಾರದ ಅಧಿಕಾರಗಳು
9. ಪ್ರಾಧಿಕಾರದ ಉಪ-ಸಮಿತಿಗಳು
10. ಆಯುಕ್ತರ ನೇಮಕಾತಿ
11. ಆಯುಕ್ತರ ಅಧಿಕಾರಗಳು ಮತ್ತು ಕರ್ತವ್ಯಗಳು
12. ಪ್ರಾಧಿಕಾರದ ನೌಕರರು
13. ಪ್ರಾಧಿಕಾರದ ಅಡಿಯಲ್ಲಿನ ಸೇವೆಗೆ ಸಾಮಾನ್ಯ ಅನರ್ಹತೆಗಳು
14. ಪ್ರಾಧಿಕಾರದ ಸಭೆಗಳು
15. ವ್ಯವಹರಣೆಗಳು ಸರಿಯಾದುವೆಂದು ಮತ್ತು ಊರ್ಜಿತವಾದವೆಂದು ಪೂರ್ವಭಾವನೆ ಮಾಡುವುದು
16. ಸುತ್ತೋಲೆಯ ಮೂಲಕ ಪ್ರಾಧಿಕಾರದ ತೀರ್ಮಾನಗಳನ್ನು ಸೂಚಿಸುವುದು
17. ಕೆಲವೊಂದು ತೀರ್ಮಾನಗಳನ್ನು ಕೈಗೊಳ್ಳಲು ಅಧ್ಯಕ್ಷರ ಅಧಿಕಾರ
18. ಬಸವನಬಾಗೇವಾಡಿಯಲ್ಲಿಯ ಪರಂಪರಾ ತಾಣಗಳು
19. ಅನುಸೂಚಿಯ ತಿದ್ದುಪಡಿಗೆ ಅಧಿಕಾರ
20. ಅಭಿವೃದ್ಧಿ ಯೋಜನೆಯನ್ನು ಸಿದ್ಧಪಡಿಸುವುದು, ಅದರ ಅನುಮೋದನೆ ಹಾಗೂ ಅದನ್ನು ಕಾರ್ಯಗತಗೊಳಿಸುವುದು
21. ಬಸವನಬಾಗೇವಾಡಿಯ ನಿರ್ವಹಣೆ
22. ಪ್ರಾಧಿಕಾರದ ಅನುಮತಿ ಇಲ್ಲದೆ ಯಾವುದೇ ಇತರ ಪ್ರಾಧಿಕಾರ ಅಥವಾ ವ್ಯಕ್ತಿಯು ಅಭಿವೃದ್ಧಿಯನ್ನು ಕೈಗೊಳ್ಳಕೂಡದು
23. ಪ್ರವೇಶಕ್ಕೆ ಅಧಿಕಾರ

24. ಶುಲ್ಕ ವಿಧಿಸುವುದು

25. ಪ್ರಾಧಿಕಾರಕ್ಕೆ ರಾಜ್ಯ ಸರ್ಕಾರದ ಅಧಿಕಾರಗಳ ಪ್ರತ್ಯಾಯೋಜನೆ

26. ಬೀದಿಗಳು ಮುಂತಾದವುಗಳ ನಿರ್ವಹಣೆಯ ಕರ್ತವ್ಯ

27. 1974ರ ಕರ್ನಾಟಕ ಅಧಿನಿಯಮ 32ನ್ನು ಪ್ರಾಧಿಕಾರದ ಆವರಣಗಳಿಗೆ ಅನ್ವಯಿಸುವುದು

28. ಪ್ರವಾಸೋದ್ಯಮಕ್ಕೆ ಮತ್ತು ಯಾತ್ರೆ ಕೈಗೊಳ್ಳುವುದಕ್ಕೆ ಪ್ರಾಧಿಕಾರವು ಉತ್ತೇಜಿಸುವುದು

29. ಅಧಿಕಾರಗಳ ಪ್ರತ್ಯಾಯೋಜನೆ

30. ಪ್ರಾಧಿಕಾರದ ನಿಧಿ

31. ನಿಧಿಯ ಬಳಕೆ

32. ಸರ್ಕಾರದಿಂದ ಅನುದಾನ

33. ಪ್ರಾಧಿಕಾರದ ಆಯವ್ಯಯ

34. ಲೆಕ್ಕ ಪತ್ರಗಳು ಮತ್ತು ಲೆಕ್ಕಪರಿಶೋಧನೆ

35. ವರದಿಗಳು

36. ಪ್ರಾಧಿಕಾರವು ತನ್ನ ಅಧಿಕಾರ ವ್ಯಾಪ್ತಿಯೊಳಗಿನ ಯಾವುದೇ ಜಮೀನನ್ನು ಮಾರಾಟ ಮಾಡಕೂಡದು

37. ಕೆಲವು ವ್ಯಕ್ತಿಗಳು ಸಾರ್ವಜನಿಕ ನೌಕರರಾಗಿರತಕ್ಕದ್ದು

38. ಈ ಅಧಿನಿಯಮದ ಅಡಿ ಸದ್ಭಾವನೆಯಿಂದ ಕೈಗೊಂಡ ಕ್ರಮಕ್ಕೆ ರಕ್ಷಣೆ

39. ಕರ್ತವ್ಯ ನಿರ್ವಹಣೆಯಲ್ಲಿ ಲೋಪ

40. ಪ್ರಾಧಿಕಾರದ ವಿಘಟನೆ

41. ರಾಜ್ಯ ಸರ್ಕಾರದ ನಿಯಂತ್ರಣ

42. ನಿರ್ದೇಶನಗಳನ್ನು ನೀಡುವುದಕ್ಕೆ ರಾಜ್ಯ ಸರ್ಕಾರದ ಅಧಿಕಾರ

43. ನಿಯಮಗಳ ರಚನಾಧಿಕಾರ

44. ವಿನಿಯಮಗಳ ರಚನಾಧಿಕಾರ

45. ತೊಂದರೆಗಳನ್ನು ನಿವಾರಿಸುವ ಅಧಿಕಾರ

**I**

**ಉದ್ದೇಶಗಳು ಮತ್ತು ಕಾರಣಗಳ ಹೇಳಿಕೆ**

2025ರ ತಿದ್ದುಪಡಿ ಅಧಿನಿಯಮ ಸಂಖ್ಯೆ:04 2024-25ರ ಆಯವ್ಯಯ ಭಾಷಣದಲ್ಲಿ ಮಾಡಲಾದ ಪ್ರಸ್ತಾವನೆಯನ್ನು ಜಾರಿಗೆ ತರುವುದಕ್ಕಾಗಿ ಬಸವನಬಾಗೇವಾಡಿ ಅಭಿವೃದ್ಧಿ ಪ್ರಾಧಿಕಾರದ ಅಭಿವೃದ್ಧಿ ಕಾರ್ಯ ಹಾಗೂ ನಿರ್ವಹಣೆಯನ್ನು ಕೈಗೊಳ್ಳಲು ಒಂದು ಸ್ವತಂತ್ರ ಶಾಸನಬದ್ದ ಪ್ರಾಧಿಕಾರದ ರಚನೆಗೆ ಉಪಬಂಧ ಕಲ್ಪಿಸಲು ಶಾಸನವನ್ನು ಅಧಿನಿಯಮಿತಿಗೊಳಿಸುವುದು ಅವಶ್ಯವೆಂದು ಪರಿಗಣಿಸಲಾಗಿದೆ.

ಆದ್ದರಿಂದ ಈ ವಿಧೇಯಕ.

[2024ರ ವಿಧಾನ ಸಭೆಯ ವಿಧೇಯಕ ಸಂಖ್ಯೆ: 42 , ಕಡತ ಸಂಖ್ಯೆ:ಸಂವ್ಯಶಾಇ 57 ಶಾಸನ 2024]
[ಭಾರತ ಸಂವಿಧಾನದ 7ನೇ ಅನುಸೂಚಿಯ 2ನೇ ಪಟ್ಟಿಯ 32ನೇ ನಮೂದನೆಯಡಿ ಬರುತ್ತದೆ.]
[ಕರ್ನಾಟಕ ರಾಜ್ಯ ಪತ್ರದ ಭಾಗ IVಎ ವಿಶೇಷ ರಾಜ್ಯ ಪತ್ರಿಕೆ ಸಂಖ್ಯೆ:13, ದಿನಾಂಕ:09.01.2025 ರಲ್ಲಿ ಪ್ರಕಟಗೊಂಡಿದೆ]

II

**2025ರ ಅಧಿನಿಯಮ ಸಂಖ್ಯೆ: 75** ಪ್ರಾಧಿಕಾರದ ಪರಿಮಿತಿಯೊಳಗೆ ಬರುವ ಪ್ರಾದೇಶಿಕ ಮತಕ್ಷೇತ್ರದಲ್ಲಿ ಬಸವನಬಾಗೇವಾಡಿಯನ್ನು ಭಾಗಶಃ ಅಥವಾ ಸಂಪೂರ್ಣವಾಗಿ ಪ್ರತಿನಿಧಿಸುವ ಕರ್ನಾಟಕ ರಾಜ್ಯ ವಿಧಾನ ಪರಿಷತ್ತಿನ ಸದಸ್ಯರನ್ನು ಪದನಿಮಿತ್ತ ಸದಸ್ಯರನ್ನಾಗಿ ಸೇರಿಸಲು ಬಸವನಬಾಗೇವಾಡಿ ಅಭಿವೃದ್ಧಿ ಪ್ರಾಧಿಕಾರ ಅಧಿನಿಯಮ, 2024 (2025ರ ಕರ್ನಾಟಕ ಅಧಿನಿಯಮ ಸಂ.4)ನ್ನು ತಿದ್ದುಪಡಿ ಮಾಡುವುದು ಅವಶ್ಯಕವೆಂದು ಪರಿಗಣಿಸಿದೆ. .

ಆದ್ದರಿಂದ ಈ ವಿಧೇಯಕ.

[2025ರ ವಿಧಾನ ಸಭೆಯ ವಿಧೇಯಕ ಸಂಖ್ಯೆ:66, ಕಡತ ಸಂಖ್ಯೆ:ಸಂವ್ಯಶಾಇ 74 ಶಾಸನ 2025]

[ಭಾರತ ಸಂವಿಧಾನದ 7ನೇ ಅನುಸೂಚಿಯ 2ನೇ ಪಟ್ಟಿಯ 32ನೇ ನಮೂದನೆಯಡಿ ಬರುತ್ತದೆ.]

[ಕರ್ನಾಟಕ ರಾಜ್ಯ ಪತ್ರದ ಭಾಗ IVಎ ವಿಶೇಷ ರಾಜ್ಯ ಪತ್ರಿಕೆ ಸಂಖ್ಯೆ:635, ದಿನಾಂಕ:26.09.2025ರಲ್ಲಿ ಪ್ರಕಟಗೊಂಡಿದೆ]

## 2025 ರ ಕರ್ನಾಟಕ ಅಧಿನಿಯಮ ಸಂಖ್ಯೆ: 04

(2025ರ ಜನವರಿ ತಿಂಗಳ 9ನೇ ದಿನಾಂಕದಂದು ಕರ್ನಾಟಕ ರಾಜ್ಯಪತ್ರದ ವಿಶೇಷ ಸಂಚಿಕೆಯಲ್ಲಿ ಮೊದಲು ಪ್ರಕಟವಾಗಿದೆ)

## ಬಸವನಬಾಗೇವಾಡಿ ಅಭಿವೃದ್ಧಿ ಪ್ರಾಧಿಕಾರ ಅಧಿನಿಯಮ, 2024

(2025ರ ಜನವರಿ ತಿಂಗಳ 8ನೇ ದಿನಾಂಕದಂದು ರಾಜ್ಯ ಪಾಲರಿಂದ ಒಪ್ಪಿಗೆಯನ್ನು ಪಡೆಯಲಾಗಿದೆ)
(2025ರ ಅಧಿನಿಯಮ ಸಂಖ್ಯೆ:75ರ ಮೂಲಕ ತಿದ್ದುಪಡಿಯಾದಂತೆ)

ವಿಜಯಪುರ ಜಿಲ್ಲೆಯ ಬಸವನಬಾಗೇವಾಡಿ, ಹೊರಮಟ್ಟಿ ಗುಡ್ಡ, ಇಂಗಳೇಶ್ವರ, ಮಸಬಿನಾಳ, ದೇಗಿನಾಳ, ದೇವರಹಿಪ್ಪರಗಿ, ಶಿವನಾಗಿ ಮತ್ತು ತಂಗಡಗಿ ಮತ್ತು ಅವುಗಳ ಸುತ್ತಮುತ್ತಲಿನ ಪರಂಪರಾ ತಾಣಗಳ ಅಭಿವೃದ್ಧಿ ಮತ್ತು ನಿರ್ವಹಣೆಗೆ ಒಂದು ಪ್ರಾಧಿಕಾರವನ್ನು ಸ್ಥಾಪಿಸುವುದಕ್ಕಾಗಿ ಉಪಬಂಧ ಕಲ್ಪಿಸಲು ಒಂದು ಅಧಿನಿಯಮ.

ವಿಜಯಪುರ ಜಿಲ್ಲೆಯ ಬಸವನಬಾಗೇವಾಡಿ, ಹೊರಮಟ್ಟಿ ಗುಡ್ಡ, ಇಂಗಳೇಶ್ವರ, ಮಸಬಿನಾಳ, ದೇಗಿನಾಳ, ದೇವರಹಿಪ್ಪರಗಿ, ಶಿವನಾಗಿ ಮತ್ತು ತಂಗಡಗಿ ಮತ್ತು ಅವುಗಳ ಸುತ್ತಮುತ್ತಲಿನ ಪರಂಪರಾ ತಾಣಗಳನ್ನು ಅಂತಾರಾಷ್ಟ್ರೀಯ ಯಾತ್ರಾ ಸ್ಥಳವಾಗಿ, ಸಾಂಸ್ಕೃತಿಕ ಮತ್ತು ಪ್ರವಾಸಿ ಕೇಂದ್ರಗಳಾಗಿ ಅಭಿವೃದ್ಧಿಗೊಳಿಸಲು ಮತ್ತು ಅವುಗಳನ್ನು ನಿರ್ವಹಿಸಿಕೊಂಡು ಬರಲು ಒಂದು ಪ್ರಾಧಿಕಾರದ ಸ್ಥಾಪನೆಗಾಗಿ ಉಪಬಂಧ ಕಲ್ಪಿಸುವುದು ಯುಕ್ತವಾಗಿರುವುದರಿಂದ;

ಇದು ಭಾರತ ಗಣರಾಜ್ಯದ ಎಪ್ಪತ್ತೈದನೇ ವರ್ಷದಲ್ಲಿ ಕರ್ನಾಟಕ ರಾಜ್ಯ ವಿಧಾನಮಂಡಲದಿಂದ ಈ ಮುಂದಿನಂತೆ ಅಧಿನಿಯಮಿತವಾಗಲಿ, ಎಂದರೆ;-

### ಅಧ್ಯಾಯ-I
### ಪ್ರಾರಂಭಿಕ

**1. ಸಂಕ್ಷಿಪ್ತ ಹೆಸರು, ವ್ಯಾಪ್ತಿ ಮತ್ತು ಪ್ರಾರಂಭ.-** (1) ಈ ಅಧಿನಿಯಮವನ್ನು ಬಸವನಬಾಗೇವಾಡಿ ಅಭಿವೃದ್ಧಿ ಪ್ರಾಧಿಕಾರ ಅಧಿನಿಯಮ, 2024 ಎಂದು ಕರೆಯತಕ್ಕದ್ದು.

(2) ಇದು 2ನೇ ಪ್ರಕರಣದ (ಸಿ) ಖಂಡ ಮತ್ತು ಅನುಸೂಚಿಯಲ್ಲಿ ನಿರ್ದಿಷ್ಟಪಡಿಸಿ ಪರಿಭಾಷಿಸಲಾದ ಬಸವನಬಾಗೇವಾಡಿ ಪ್ರದೇಶ ಮತ್ತು ಇತರ ಪ್ರದೇಶಗಳಿಗೆ ವ್ಯಾಪ್ತವಾಗತಕ್ಕದ್ದು.

(3) ಇದು ರಾಜ್ಯ ಸರ್ಕಾರವು ಸರ್ಕಾರಿ ರಾಜ್ಯಪತ್ರದಲ್ಲಿ ಅಧಿಸೂಚನೆಯ ಮೂಲಕ ಗೊತ್ತುಪಡಿಸಬಹುದಾದಂಥ ದಿನಾಂಕದಿಂದ ಜಾರಿಗೆ ಬರತಕ್ಕದ್ದು ಮತ್ತು ಈ ಅಧಿನಿಯಮದ ಬೇರೆ ಬೇರೆ ಉಪಬಂಧಗಳಿಗೆ ಬೇರೆ ಬೇರೆ ದಿನಾಂಕಗಳನ್ನು ಗೊತ್ತುಪಡಿಸಬಹುದು.

**2. ಪರಿಭಾಷೆಗಳು.-** ಈ ಅಧಿನಿಯಮದಲ್ಲಿ ಸಂದರ್ಭವು ಅನ್ಯಥಾ ಅಗತ್ಯಪಡಿಸಿದ ಹೊರತು,-

(ಎ) ``ಸೌಕರ್ಯ'' ಎಂಬುದರಲ್ಲಿ ರಸ್ತೆಗಳು, ಬೀದಿಗಳು, ಸುರಂಗ ಮಾರ್ಗಗಳು, ದೀಪವ್ಯವಸ್ಥೆ, ಚರಂಡಿ ವ್ಯವಸ್ಥೆ, ನೈರ್ಮಲ್ಯ ವ್ಯವಸ್ಥೆ, ವಿದ್ಯುಚ್ಛಕ್ತಿ ಮತ್ತು ನೀರು ಸರಬರಾಜು ಅಥವಾ ಇತರ ಅನುಕೂಲಗಳು, ಸಾರ್ವಜನಿಕ ಕಾಮಗಾರಿಗಳು, ಮಾರುಕಟ್ಟೆ ಸ್ಥಳಗಳು, ಅಂಚೆ ಕಚೇರಿಗಳು, ಬ್ಯಾಂಕುಗಳು, ಆಸ್ಪತ್ರೆಗಳು, ಚಿಕಿತ್ಸಾಲಯಗಳು, ಪೊಲೀಸು ಠಾಣೆಗಳು, ನ್ಯಾಯಬೆಲೆ ಅಂಗಡಿಗಳು, ಹಾಲಿನ ಕೇಂದ್ರಗಳು, ಗ್ರಂಥಾಲಯಗಳು, ಮನೋರಂಜನಾ ಕೇಂದ್ರಗಳು, ಪ್ರಾಧಿಕಾರವು ಪ್ರಾಧಿಕೃತಗೊಳಿಸಿದ ಜನೋಪಯೋಗಿ ಸೇವೆಯ ಯಾವುವೇ ಸೇವಾ ಕೇಂದ್ರಗಳು ಅಥವಾ ಇತರ ಸೌಲಭ್ಯಗಳು; ಮತ್ತು ರಾಜ್ಯ ಸರ್ಕಾರವು ಅಧಿಸೂಚನೆಯ ಮೂಲಕ ನಿರ್ದಿಷ್ಟಪಡಿಸಬಹುದಾದಂಥ ಇತರ ಸೌಕರ್ಯಗಳು ಒಳಗೊಳ್ಳುತ್ತವೆ;

(ಬಿ) `ಪ್ರಾಧಿಕಾರ' ಎಂದರೆ, 3ನೇ ಪ್ರಕರಣದ ಅಡಿಯಲ್ಲಿ ರಚಿಸಿದ ಬಸವನಬಾಗೇವಾಡಿ ಅಭಿವೃದ್ಧಿ ಪ್ರಾಧಿಕಾರ;

(ಸಿ) ` ಬಸವನಬಾಗೇವಾಡಿ ' ಎಂದರೆ, ಬಸವನಬಾಗೇವಾಡಿ ಮತ್ತು ಇತರ ಪ್ರದೇಶ ಮತ್ತು ಬಸವನಬಾಗೇವಾಡಿಯಲ್ಲಿರುವ ಪರಂಪರಾ ತಾಣಗಳ ಅಭಿವೃದ್ಧಿಗಾಗಿ ಸರ್ಕಾರವು ಕಾಲಕಾಲಕ್ಕೆ ಆರ್ಜಿಸಬಹುದಾದ ಭೂಮಿಗಳು ಹಾಗೂ ಅಧಿಸೂಚನೆಯ ಮೂಲಕ ರಾಜ್ಯಸರ್ಕಾರವು ಘೋಷಿಸಬಹುದಾದಂಥ ಇತರೆ ಪ್ರದೇಶಗಳು ಹಾಗೂ ಅದು ಅವುಗಳನ್ನು ಒಳಗೊಳ್ಳುತ್ತದೆ.

(ಡಿ) `ಅಧ್ಯಕ್ಷರು' ಎಂದರೆ, ಪ್ರಾಧಿಕಾರದ ಅಧ್ಯಕ್ಷರು;

(ಇ) `ಆಯುಕ್ತ' ಎಂದರೆ, 10ನೇ ಪ್ರಕರಣದ ಅಡಿಯಲ್ಲಿ ನೇಮಕ ಮಾಡಲಾದ ಪ್ರಾಧಿಕಾರದ ಆಯುಕ್ತ;

(ಎಫ್) `ನಿಧಿ' ಎಂದರೆ, ಪ್ರಾಧಿಕಾರದ ನಿಧಿ;

(ಜಿ) ``ಪರಂಪರಾ ತಾಣ'' ಎಂದರೆ, ಪ್ರಾಚೀನ ಸ್ಮಾರಕಗಳು ಮತ್ತು ಪುರಾತತ್ವ ಸ್ಥಳಗಳು ಹಾಗೂ ಅವಶೇಷಗಳ ಅಧಿನಿಯಮ, 1958ರ (1958ರ ಕೇಂದ್ರ ಅಧಿನಿಯಮ 24) ಅಡಿಯಲ್ಲಿ ಸಂರಕ್ಷಿತ ಪ್ರದೇಶವೆಂದು ಉಲ್ಲೇಖಿಸಲಾದ ಪ್ರದೇಶವನ್ನು ಹೊರತುಪಡಿಸಿ, ಅನುಸೂಚಿಯಲ್ಲಿ ನಿರ್ದಿಷ್ಟಪಡಿಸಿದ ತಾಣಗಳನ್ನು ಒಳಗೊಳ್ಳುವ ಸಂಪೂರ್ಣ ಪ್ರದೇಶ.

(ಎಚ್) `ಸದಸ್ಯ' ಎಂದರೆ, ಪ್ರಾಧಿಕಾರದ ಸದಸ್ಯ;

(ಐ) `ವಿನಿಯಮಗಳು' ಎಂದರೆ, 44ನೇ ಪ್ರಕರಣದ ಅಡಿಯಲ್ಲಿ ರಚಿಸಿದ ಪ್ರಾಧಿಕಾರದ ವಿನಿಯಮಗಳು;

(ಜೆ) `ಅನುಸೂಚಿ' ಎಂದರೆ, ಈ ಅಧಿನಿಯಮಕ್ಕೆ ಲಗತ್ತಿಸಲಾದ ಅನುಸೂಚಿ.

## ಅಧ್ಯಾಯ - II

## ಪ್ರಾಧಿಕಾರ ಮತ್ತು ಅದರ ನೌಕರರು

**3. ಬಸವನಬಾಗೇವಾಡಿ ಅಭಿವೃದ್ಧಿ ಪ್ರಾಧಿಕಾರ.-** (1) ಈ ಅಧಿನಿಯಮದ ಪ್ರಾರಂಭದ ತರುವಾಯ ಆದಷ್ಟು ಬೇಗನೇ, ಈ ಅಧಿನಿಯಮದ ಉದ್ದೇಶಗಳಿಗಾಗಿ, ` ಬಸವನಬಾಗೇವಾಡಿ ಅಭಿವೃದ್ಧಿ ಪ್ರಾಧಿಕಾರ' ಎಂದು ಕರೆಯಲಾಗುವ ಒಂದು ಪ್ರಾಧಿಕಾರವನ್ನು ಸ್ಥಾಪಿಸತಕ್ಕದ್ದು.

(2) ಪ್ರಾಧಿಕಾರವು ಬಸವನಬಾಗೇವಾಡಿಯಲ್ಲಿ ತನ್ನ ಕೇಂದ್ರ ಕಾರ್ಯಸ್ಥಾನವನ್ನು ಹೊಂದಿರತಕ್ಕದ್ದು.

(3) ಪ್ರಾಧಿಕಾರವು, ಶಾಶ್ವತ ಉತ್ತರಾಧಿಕಾರ ಮತ್ತು ಸಾಮಾನ್ಯ ಮೊಹರನ್ನು ಹೊಂದಿರುವ, ಚರ ಮತ್ತು ಸ್ಥಿರ ಸ್ವತ್ತುಗಳೆರಡನ್ನು ಆರ್ಜಿಸುವ, ಧಾರಣ ಮಾಡುವ ಹಾಗೂ ವಿಲೆ ಮಾಡುವ ಮತ್ತು ಕರಾರು ಮಾಡಿಕೊಳ್ಳುವ ಅಧಿಕಾರವನ್ನು ಹೊಂದಿರುವ, ಮೇಲೆ ಹೇಳಿದ ಹೆಸರಿನ ಒಂದು ನಿಗಮಿತ ನಿಕಾಯವಾಗಿರತಕ್ಕದ್ದು ಮತ್ತು ಸದರಿ ಹೆಸರಿನಿಂದ ದಾವೆ ಹೂಡತಕ್ಕದ್ದು ಮತ್ತು ದಾವೆಗೆ ಗುರಿಯಾಗತಕ್ಕದ್ದು.

(4) ಪ್ರಾಧಿಕಾರವು, ಈ ಮುಂದಿನ ಸದಸ್ಯರನ್ನು ಒಳಗೊಂಡಿರತಕ್ಕದ್ದು, ಎಂದರೆ:-

(ಎ) ಕಂದಾಯ ಇಲಾಖೆಯ ಮಂತ್ರಿ, ಪ್ರಾಧಿಕಾರದ ಪದನಿಮಿತ್ತ ಅಧ್ಯಕ್ಷರಾಗಿರತಕ್ಕದ್ದು;

(ಬಿ) ವಿಜಯಪುರ ಜಿಲ್ಲೆಯ ಉಸ್ತುವಾರಿ ಮಂತ್ರಿ - ಪದನಿಮಿತ್ತ ಸದಸ್ಯರು.

(ಸಿ) ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಮಂತ್ರಿ- ಪದನಿಮಿತ್ತ ಸದಸ್ಯರು.

(ಡಿ) ಪ್ರವಾಸೋದ್ಯಮ ಮಂತ್ರಿ- ಪದನಿಮಿತ್ತ ಸದಸ್ಯರು.

(ಇ) ಬಸವನಬಾಗೇವಾಡಿ ಕ್ಷೇತ್ರವನ್ನು ಪ್ರತಿನಿಧಿಸುವ ರಾಜ್ಯ ವಿಧಾನಸಭೆಯ ಸದಸ್ಯರು- ಪದನಿಮಿತ್ತ ಸದಸ್ಯರು.

(ಎಫ್) ಮುದ್ದೇಬಿಹಾಳ ವಿಧಾನ ಸಭಾಕ್ಷೇತ್ರವನ್ನು ಪ್ರತಿನಿಧಿಸುವ ರಾಜ್ಯ ವಿಧಾನಸಭೆ ಸದಸ್ಯರು – ಪದನಿಮಿತ್ತ ಸದಸ್ಯರು.

(ಜಿ) ಬಸವನಬಾಗೇವಾಡಿಯನ್ನು ಭಾಗಶಃ ಅಥವಾ ಪೂರ್ಣವಾಗಿ ಪ್ರತಿನಿಧಿಸುವ ಹಾಗೂ ಅದರ ಪರಿಮಿತಿಯೊಳಗೆ ತಮ್ಮ ಚುನಾವಣಾ ಕ್ಷೇತ್ರವನ್ನು ಹೊಂದಿರುವ ಲೋಕಸಭಾ – ಪದನಿಮಿತ್ತ ಸದಸ್ಯರು.

(ಎಚ್) ಅಧ್ಯಕ್ಷರು, ಬಸವ ಸಮಿತಿ, ಬಸವ ಭವನ, ಬೆಂಗಳೂರು- ಸದಸ್ಯರು.

[1][(ಜಿ-1) ಪ್ರಾಧಿಕಾರದ ಪರಿಮಿತಿಯೊಳಗೆ ಬರುವ ಪ್ರಾದೇಶಿಕ ಮತಕ್ಷೇತ್ರದಲ್ಲಿ ಬಸವನ ಬಾಗೇವಾಡಿಯನ್ನು ಭಾಗಶಃ ಅಥವಾ ಸಂಪೂರ್ಣವಾಗಿ ಪ್ರತಿನಿಧಿಸುವ ಕರ್ನಾಟಕ ರಾಜ್ಯ ವಿಧಾನ ಪರಿಷತ್ತಿನ ಸದ್ಯಸ್ಯರು - ಪದನಿಮಿತ್ತ ಸದಸ್ಯರು .][1]

(ಐ) ಅಧ್ಯಕ್ಷರು, ಅಖಿಲ ಭಾರತ ವೀರಶೈವ ಮಹಾಸಭಾ, ಬೆಂಗಳೂರು- ಸದಸ್ಯರು.

(ಜೆ) ರಾಜ್ಯಸರ್ಕಾರವು ನಾಮನಿರ್ದೇಶಿಸಿದ ಐವರಿಗೆ ಮೀರದ ಸದಸ್ಯರು, ಅವರುಗಳಲ್ಲಿ ಒಬ್ಬರು ದೇವಾಲಯ ವಾಸ್ತುಶಿಲ್ಪದ ಜ್ಞಾನ ಹೊಂದಿರುವ ಸಿವಿಲ್ ಇಂಜಿನಿಯರ್ ಅಥವಾ ವಾಸ್ತುಶಿಲ್ಪಿಯಾಗಿರತಕ್ಕದ್ದು.

(ಕೆ) ಸರ್ಕಾರದ ಕಾರ್ಯದರ್ಶಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ- ಪದನಿಮಿತ್ತ ಸದಸ್ಯರು.

(ಎಲ್) ಸರ್ಕಾರದ ಕಾರ್ಯದರ್ಶಿ, ಪ್ರವಾಸೋದ್ಯಮ ಇಲಾಖೆ- ಪದನಿಮಿತ್ತ ಸದಸ್ಯರು.

(ಎಂ) ಸರ್ಕಾರದ ಕಾರ್ಯದರ್ಶಿ, ಕಂದಾಯ ಇಲಾಖೆ- ಪದನಿಮಿತ್ತ ಸದಸ್ಯರು.

(ಎನ್) ಸರ್ಕಾರದ ಕಾರ್ಯದರ್ಶಿ, ಆರ್ಥಿಕ ಇಲಾಖೆ - ಪದನಿಮಿತ್ತ ಸದಸ್ಯರು.

(ಓ) ಸರ್ಕಾರದ ಕಾರ್ಯದರ್ಶಿ, ನಗರಾಭಿವೃದ್ಧಿ ಇಲಾಖೆ - ಪದನಿಮಿತ್ತ ಸದಸ್ಯರು.

(ಪಿ) ಜಿಲ್ಲಾಧಿಕಾರಿ, ವಿಜಯಪುರ ಜಿಲ್ಲೆ- ಪದನಿಮಿತ್ತ ಸದಸ್ಯರು.

(ಕ್ಯೂ) ಮುಖ್ಯ ಕಾರ್ಯನಿರ್ವಹಣಾಧಿಕಾರಿ, ಜಿಲ್ಲಾ ಪಂಚಾಯಿತಿ ವಿಜಯಪುರ - ಪದನಿಮಿತ್ತ ಸದಸ್ಯರು.

(ಆರ್) ಪ್ರಾಧಿಕಾರದ ಆಯುಕ್ತ -ಸದಸ್ಯ ಕಾರ್ಯದರ್ಶಿಯಾಗಿರತಕ್ಕದ್ದು.

(ಎಸ್) ಅಧ್ಯಕ್ಷ, ಬಸವನಬಾಗೇವಾಡಿ ಪುರಸಭೆ- ಪದನಿಮಿತ್ತ ಸದಸ್ಯರು.

(ಟಿ) ನಿರ್ದೇಶಕ, ಪುರಾತತ್ವ ಸಂಗ್ರಹಾಲಯಗಳು ಮತ್ತು ಪರಂಪರೆ ಇಲಾಖೆ ಅಥವಾ ಗ್ರೂಪ್-ಎ ದರ್ಜೆಗಿಂತ ಕಡಿಮೆಯಲ್ಲದ ಆತನ ನಾಮ ನಿರ್ದೇಶಿತ- ಪದನಿಮಿತ್ತ ಸದಸ್ಯರು.

(ಯು) ನಿರ್ದೇಶಕ, ಪೌರಾಡಳಿತ ಇಲಾಖೆ ಅಥವಾ ಗ್ರೂಪ್-ಎ ದರ್ಜೆಗಿಂತ ಕಡಿಮೆಯಲ್ಲದ ಆತನ ನಾಮ ನಿರ್ದೇಶಿತ- ಪದನಿಮಿತ್ತ ಸದಸ್ಯರು.

(ವಿ) ನಿರ್ದೇಶಕ, ಪಟ್ಟಣ ಮತ್ತು ಗ್ರಾಮಾಂತರ ಯೋಜನೆ ಇಲಾಖೆ ಅಥವಾ ಗ್ರೂಪ್-ಎ ದರ್ಜೆಗಿಂತ ಕಡಿಮೆಯಲ್ಲದ ಆತನ ನಾಮ ನಿರ್ದೇಶಿತ- ಪದನಿಮಿತ್ತ ಸದಸ್ಯರು.

(ಡಬ್ಲ್ಯೂ) ಕುಲಪತಿ, ಕರ್ನಾಟಕ ವಿಶ್ವವಿದ್ಯಾಲಯ ,ಧಾರವಾಡ- ಪದನಿಮಿತ್ತ ಸದಸ್ಯರು.

(ಎಕ್ಸ್) ಕುಲಪತಿ, ಕನ್ನಡ ವಿಶ್ವವಿದ್ಯಾಲಯ, ಹಂಪಿ - ಪದನಿಮಿತ್ತ ಸದಸ್ಯರು.

(5) ಮುಖ್ಯ ಮಂತ್ರಿಯವರು ಸಚಿವ ಸಂಪುಟದ ಯಾವೊಬ್ಬ ಮಂತ್ರಿಯನ್ನು ಪ್ರಾಧಿಕಾರದ ಉಪಾಧ್ಯಕ್ಷರನ್ನಾಗಿ ನಾಮನಿರ್ದೇಶಿಸಬಹುದು.

1. 2025ರ ಅಧಿನಿಯಮ 75ರ ಮೂಲಕ ದಿ: 26.09.2025 ರಿಂದ ಜಾರಿಗೆ ಬರುವಂತೆ ಸೇರಿಸಲಾಗಿದೆ.

**4. ಪದಾವಧಿ ಮತ್ತು ಸೇವಾ ಷರತ್ತುಗಳು.-** (1) ರಾಜ್ಯ ಸರ್ಕಾರದ ಇಚ್ಛೆಗೊಳಪಟ್ಟು, ರಾಜ್ಯ ಸರ್ಕಾರವು ನಾಮನಿರ್ದೇಶಿಸಿದ ಅಧಿಕಾರೇತರ ಸದಸ್ಯರು ಮೂರು ವರ್ಷಗಳ ಅವಧಿಗೆ ಪದಧಾರಣ ಮಾಡತಕ್ಕದ್ದು;

(2) ಯಾವೊಬ್ಬ ಅಧಿಕಾರೇತರ ಸದಸ್ಯನು ರಾಜ್ಯ ಸರ್ಕಾರಕ್ಕೆ ಪತ್ರ ಬರೆದು ಅದಕ್ಕೆ ತನ್ನ ಸಹಿ ಹಾಕಿ ತನ್ನ ಪದಕ್ಕೆ ರಾಜೀನಾಮೆ ನೀಡಬಹುದು, ಆದರೆ ತನ್ನ ರಾಜೀನಾಮೆಯು ಅಂಗೀಕಾರವಾಗುವವರೆಗೂ ತನ್ನ ಪದದಲ್ಲಿ ಮುಂದುವರಿಯತಕ್ಕದ್ದು.

(3) ಅಧಿಕಾರೇತರ ಸದಸ್ಯರು ನಿಯಮಿಸಬಹುದಾದಂಥ ಭತ್ಯೆಗಳನ್ನು ಪಡೆಯತಕ್ಕದ್ದು.

**5. ಸದಸ್ಯತ್ವಕ್ಕೆ ಅನರ್ಹತೆಗಳು.-** ಒಬ್ಬ ವ್ಯಕ್ತಿಯು,-

(ಎ) ರಾಜ್ಯ ಸರ್ಕಾರದ ಅಭಿಪ್ರಾಯದಲ್ಲಿ ನೈತಿಕ ಅಧಃಪತನವನ್ನೊಳಗೊಳ್ಳುವ ಒಂದು ಅಪರಾಧಕ್ಕಾಗಿ ಅಪರಾಧಿ ಎಂದು ನಿರ್ಣೀತನಾಗಿದ್ದು ಕಾರವಾಸದ ಶಿಕ್ಷೆಗೆ ಗುರಿಯಾಗಿದ್ದರೆ; ಅಥವಾ

(ಬಿ) ಅಸ್ವಸ್ಥ ಚಿತ್ತದವನಾಗಿದ್ದರೆ ಮತ್ತು ಹಾಗೆಂದು ಸಕ್ಷಮ ನ್ಯಾಯಾಲಯದಿಂದ ಘೋಷಿತನಾಗಿದ್ದರೆ; ಅಥವಾ

(ಸಿ) ಅವಿಮುಕ್ತ ದಿವಾಳಿಯಾಗಿದ್ದರೆ; ಅಥವಾ

(ಡಿ) ಕೇಂದ್ರ ಸರ್ಕಾರದ ಅಥವಾ ಒಂದು ರಾಜ್ಯ ಸರ್ಕಾರದ ಅಥವಾ ಕೇಂದ್ರ ಸರ್ಕಾರ ಅಥವಾ ಒಂದು ರಾಜ್ಯ ಸರ್ಕಾರವು ಒಡೆತನ ಹೊಂದಿರುವ ಅಥವಾ ನಿಯಂತ್ರಣ ಹೊಂದಿರುವ ಒಂದು ನಿಕಾಯ ಅಥವಾ ನಿಗಮದ ಸೇವೆಯಿಂದ ತೆಗೆದು ಹಾಕಲಾದ ವ್ಯಕ್ತಿಯಾಗಿದ್ದರೆ ಅಥವಾ ವಜಾ ಮಾಡಲಾದ ವ್ಯಕ್ತಿಯಾಗಿದ್ದರೆ; ಅಥವಾ

(ಇ) ಪ್ರಾಧಿಕಾರದ ಆದೇಶದಿಂದ ಮಾಡಲಾದ ಯಾವುದೇ ಕಾಮಗಾರಿಯಲ್ಲಿ ಅಥವಾ ಪ್ರಾಧಿಕಾರದೊಡನೆ ಅಥವಾ ಅದರ ಅಡಿಯಲ್ಲಿ ಅಥವಾ ಅದರ ಮೂಲಕ ಅಥವಾ ಅದರ ಪರವಾಗಿ ಮಾಡಿಕೊಂಡ ಯಾವುದೇ ಕರಾರು ಅಥವಾ ನಿಯೋಜನೆಯಲ್ಲಿ ಸ್ವಯಂ ತಾನೇ ಅಥವಾ ಒಬ್ಬ ಪಾಲುದಾರನ ಅಥವಾ ಏಜೆಂಟನ ಮೂಲಕ ಪ್ರತ್ಯಕ್ಷ ಅಥವಾ ಪರೋಕ್ಷವಾಗಿ ಯಾವುದೇ ಷೇರನ್ನು ಅಥವಾ ಹಿತಾಸಕ್ತಿಯನ್ನು ಹೊಂದಿದ್ದರೆ; ಅಥವಾ

(ಎಫ್) ಪ್ರಾಧಿಕಾರದ ಪರವಾಗಿ ವೇತನ ಪಡೆಯುವ ನ್ಯಾಯವಾದಿಯಾಗಿ ನಿಯೋಜಿತನಾಗಿದ್ದರೆ ಅಥವಾ ಪ್ರಾಧಿಕಾರದ ವಿರುದ್ಧವಾಗಿ ನ್ಯಾಯವಾದಿಯ ನಿಯೋಜನೆಯನ್ನು ಒಪ್ಪಿಕೊಂಡಿದ್ದರೆ,

- ಅವನು ಸದಸ್ಯನಾಗಿ ನೇಮಕ ಹೊಂದಲು ಅಥವಾ ಸದಸ್ಯನಾಗಿರಲು ಅನರ್ಹನಾಗತಕ್ಕದ್ದು:

ಪರಂತು, ಒಬ್ಬ ವ್ಯಕ್ತಿಯು, ಪ್ರಾಧಿಕಾರದ ವ್ಯವಹಾರಗಳಿಗೆ ಸಂಬಂಧಪಟ್ಟ ಯಾವುದೇ ಜಾಹೀರಾತನ್ನು ಪ್ರಕಟಿಸಿರುವ ಯಾವುದೇ ವೃತ್ತ ಪತ್ರಿಕೆಯಲ್ಲಿ ಷೇರು ಅಥವಾ ಹಿತಾಸಕ್ತಿಯನ್ನು ಹೊಂದಿದ್ದಾನೆಂಬ ಕಾರಣ ಮಾತ್ರದಿಂದಲೇ 5ನೇ ಪ್ರಕರಣದ (ಇ) ಖಂಡದ ಅಡಿಯಲ್ಲಿ ಅನರ್ಹನಾಗತಕ್ಕದ್ದಲ್ಲ ಅಥವಾ ಸದರಿ ಖಂಡದ ಅರ್ಥ ವ್ಯಾಪ್ತಿಯಲ್ಲಿ ಯಾವುದೇ ಕರಾರು ಅಥವಾ ನಿಯೋಜನೆಯಲ್ಲಿ ಯಾವುದೇ ಷೇರು ಅಥವಾ ಹಿತಾಸಕ್ತಿಯನ್ನು ಹೊಂದಿದ್ದಾನೆಂದು ಭಾವಿಸತಕ್ಕದ್ದಲ್ಲ.

**6. ಸದಸ್ಯರನ್ನು ತೆಗೆದು ಹಾಕುವುದು.-** (1) ರಾಜ್ಯ ಸರ್ಕಾರವು ಸದಸ್ಯರೊಬ್ಬರನ್ನು ಸದಸ್ಯಸ್ಥಾನದಿಂದ ಆತ,-

(ಎ) 5ನೇ ಪ್ರಕರಣದಲ್ಲಿ ಹೇಳಲಾದ ಅನರ್ಹತೆಗಳಲ್ಲಿ ಯಾವುದೇ ಅನರ್ಹತೆಗೆ ಒಳಪಟ್ಟರೆ ತೆಗೆದುಹಾಕತಕ್ಕದ್ದು:

ಪರಂತು ಯಾವ ಸದಸ್ಯರನ್ನೂ, ಅವರು ಆ ಪ್ರಕರಣದ 5ನೇ ಪ್ರಕರಣದ (ಇ) ಖಂಡದಲ್ಲಿ ಹೇಳಲಾದ ಅನರ್ಹತೆಗೆ ಒಳಗಾಗಿದ್ದಾರೆಂಬ ಕಾರಣದ ಮೇಲೆ, ತೆಗೆದುಹಾಕುವ ಪ್ರಸ್ತಾವದ ಸಂದರ್ಭದಲ್ಲಿ

ಅದರ ವಿರುದ್ಧ ತನ್ನ ಮನವಿಯನ್ನು ಸಲ್ಲಿಸಲು ಅವರಿಗೆ ಒಂದು ಅವಕಾಶವನ್ನು ಕೊಟ್ಟ ಹೊರತು, ತೆಗೆದು ಹಾಕತಕ್ಕದ್ದಲ್ಲ; ಅಥವಾ

(ಬಿ) ಅವರು ಕಾರ್ಯ ನಿರ್ವಹಿಸಲು ನಿರಾಕರಿಸಿದರೆ ಅಥವಾ ಕಾರ್ಯವನ್ನು ನಿರ್ವಹಿಸಲು ಅಸಮರ್ಥರಾದರೆ ತೆಗೆದುಹಾಕತಕ್ಕದ್ದು; ಅಥವಾ

(ಸಿ) ಗೈರು ಹಾಜರಾಗಲು ಪ್ರಾಧಿಕಾರದಿಂದ ಅನುಮತಿ ಪಡೆಯದೆ ಪ್ರಾಧಿಕಾರದ ಮೂರು ನಿರಂತರ ಸಭೆಗಳಿಗೆ ಗೈರುಹಾಜರಾದರೆ ತೆಗೆದುಹಾಕತಕ್ಕದ್ದು:

ಪರಂತು, ಈ ಖಂಡವು ಪದನಿಮಿತ್ತ ಸದಸ್ಯರಿಗೆ ಅನ್ವಯವಾಗತಕ್ಕದ್ದಲ್ಲ; ಅಥವಾ

(ಡಿ) ಆತನನ್ನು ಆ ಪದದಲ್ಲಿ ಮುಂದುವರಿಸಿದರೆ, ಸಾರ್ವಜನಿಕ ಹಿತಾಸಕ್ತಿಗೆ ಬಾಧಕ ಉಂಟಾಗುವಂತೆ ತನ್ನ ಸ್ಥಾನವನ್ನು ಆತ ದುರುಪಯೋಗಪಡಿಸಿಕೊಳ್ಳುವನೆಂದು ರಾಜ್ಯ ಸರ್ಕಾರವು ಅಭಿಪ್ರಾಯಪಟ್ಟರೆ ತೆಗೆದುಹಾಕತಕ್ಕದ್ದು:

ಪರಂತು, ಯಾವ ಸದಸ್ಯರನ್ನೂ ಅವರಿಗೆ ಸದರಿ ಪ್ರಸ್ತಾವದ ವಿರುದ್ಧ ಮನವಿಯನ್ನು ಹೇಳಿಕೊಳ್ಳಲು ಒಂದು ಅವಕಾಶವನ್ನು ಕೊಟ್ಟ ಹೊರತು ಈ ಖಂಡದ ಅಡಿಯಲ್ಲಿ ತೆಗೆದು ಹಾಕತಕ್ಕದ್ದಲ್ಲ.

**7. ಮರು ನೇಮಕಾತಿಗೆ ಅರ್ಹತೆ.-** ಸದಸ್ಯತ್ವ ಕೊನೆಗೊಂಡ ಯಾವೊಬ್ಬ ವ್ಯಕ್ತಿಯು, 6ನೇ ಪ್ರಕರಣದಲ್ಲಿ ಹೇಳಿದಂತೆ ಅನರ್ಹತೆಗೊಳಗಾಗಿದ್ದಾಗ ಹೊರತು, ಸದಸ್ಯರಾಗಿ ಮರುನೇಮಕ ಹೊಂದಲು ಅರ್ಹರಾಗಿರತಕ್ಕದ್ದು.

**8. ಪ್ರಾಧಿಕಾರದ ಅಧಿಕಾರಗಳು.-** (1) ಪ್ರಾಧಿಕಾರವು, ಈ ಅಧಿನಿಯಮದ ಆಶಯಗಳು ಮತ್ತು ಉಪಬಂಧಗಳನ್ನು ಜಾರಿಗೆ ತರಲು ತಾನು ಅವಶ್ಯವೆಂದು ಅಭಿಪ್ರಾಯ ಪಡುವಂಥ ಯಾವುವೇ ಕಾರ್ಯಗಳನ್ನು ಮಾಡಲು ಸಾಮಾನ್ಯವಾಗಿ ಅಧಿಕಾರ ಹೊಂದಿರತಕ್ಕದ್ದು:

ಪರಂತು, ಈ ಪ್ರಕರಣದಲ್ಲಿ ಇರುವುದು ಯಾವುದೂ, ಇತರ ಯಾವುದೇ ಪ್ರಾಧಿಕಾರದ ಮೂಲಕ ನೆರವೇರಿಸಬೇಕೆಂದು ಅಧಿನಿಯಮದಲ್ಲಿ ನಿರ್ದಿಷ್ಟವಾಗಿ ತಿಳಿಸಿದಂಥ ಯಾವುದೇ ಕಾರ್ಯವನ್ನು ನೆರವೇರಿಸುವುದಕ್ಕೆ ಪ್ರಾಧಿಕಾರಕ್ಕೆ ಅಧಿಕಾರ ನೀಡುತ್ತದ್ದೆಂದು ಭಾವಿಸತಕ್ಕದ್ದಲ್ಲ.

(2) (1)ನೇ ಉಪ-ಪ್ರಕರಣದ ಸಾಮಾನ್ಯಾನ್ವಯಕ್ಕೆ ಬಾಧಕವಾಗದಂತೆ ಪ್ರಾಧಿಕಾರವು,-

(ಎ) ನಿಯಮಿಸಬಹುದಾದಂಥ ನಿಯಮಗಳಿಗೆ ಒಳಪಟ್ಟು, ಈ ಅಧಿನಿಯಮದ ಯಾವುದೇ ಉದ್ದೇಶವನ್ನು ನೆರವೇರಿಸಲು ಅವಶ್ಯಕ ಅಥವಾ ಯುಕ್ತವೆಂದು ತಾನು ಪರಿಗಣಿಸುವಂಥ ಎಲ್ಲ ಕರಾರುಗಳನ್ನು ಮಾಡಿಕೊಳ್ಳಲು ಮತ್ತು ನೆರವೇರಿಸಲು ಅಧಿಕಾರ ಹೊಂದಿರತಕ್ಕದ್ದು ಮತ್ತು ಪ್ರತಿಯೊಂದು ಕರಾರನ್ನು ಪ್ರಾಧಿಕಾರದ ಪರವಾಗಿ ಆಯುಕ್ತರು ಮಾಡಿಕೊಳ್ಳತಕ್ಕದ್ದು:

ಪರಂತು, ಐದು ಲಕ್ಷ ರೂಪಾಯಿ ಅಥವಾ ಅದಕ್ಕೂ ಹೆಚ್ಚು ವೆಚ್ಚವನ್ನೊಳಗೊಳ್ಳುವ ಯಾವ ಕರಾರನ್ನೂ ರಾಜ್ಯ ಸರ್ಕಾರದ ಪೂರ್ವ ಮಂಜೂರಾತಿ ಇಲ್ಲದೆ ಮಾಡಿಕೊಳ್ಳತಕ್ಕದ್ದಲ್ಲ;

(ಬಿ) ರಾಜ್ಯ ಸರ್ಕಾರದ ಪೂರ್ವಾನುಮೋದನೆಯೊಂದಿಗೆ ಮತ್ತು ಈ ಸಂಬಂಧವಾಗಿ ನಿಯಮಿಸಬಹುದಾದಂಥ ಷರತ್ತುಗಳಿಗೊಳಪಟ್ಟು, ಈ ಅಧಿನಿಯಮದ ಉದ್ದೇಶಗಳಿಗಾಗಿ ಕಾಲಕಾಲಕ್ಕೆ ಅಗತ್ಯವಾಗುವ ಯಾವುದೇ ಮೊಬಲಗನ್ನು ಸಾಲವಾಗಿ ಪಡೆಯಲು;

(ಸಿ) 41ನೇ ಪ್ರಕರಣಕ್ಕೆ ಒಳಪಟ್ಟು ಮತ್ತು ನಿಯಮಿಸಬಹುದಾದಂಥ ನಿರ್ಬಂಧಗಳು, ಷರತ್ತುಗಳು ಮತ್ತು ಪರಿಮಿತಿಗಳಿಗೆ ಒಳಪಟ್ಟು ತನಗೆ ಸೇರಿದ ಚರ ಅಥವಾ ಸ್ಥಿರ ಸ್ವತ್ತನ್ನು ಗುತ್ತಿಗೆ, ಮಾರಾಟ ಅಥವಾ ಇತರ ರೀತಿಯಲ್ಲಿ ವರ್ಗಾವಣೆ ಮಾಡಲು ಮತ್ತು ರಾಜ್ಯ ಸರ್ಕಾರದ ಪೂರ್ವಾನುಮೋದನೆಯೊಂದಿಗೆ ಯಾವುದೇ ಅಭಿವೃದ್ಧಿ ಯೋಜನೆಯ ಉದ್ದೇಶಕ್ಕಾಗಿ ತನ್ನಲ್ಲಿ ನಿಹಿತವಾಗಿರುವ ಅಥವಾ ತಾನು

ಆರ್ಜಿಸಿದ್ದ ಯಾವುದೇ ಭೂಮಿಯನ್ನು, ಮೈದಾನಗಳನ್ನು ರೂಪಿಸುವ ಅಥವಾ ಕಟ್ಟಡ ನಿರ್ಮಿಸುವ ಉದ್ದೇಶಗಳಿಗಾಗಿ ಅಥವಾ ಯಾವುದೇ ಇತರ ರೀತಿಯಲ್ಲಿ ವಿನಿಯೋಗಿಸಲು ಅಥವಾ ಬಳಸಲು,

- ಅಧಿಕಾರ ಹೊಂದಿರತಕ್ಕದ್ದು.

**9. ಪ್ರಾಧಿಕಾರದ ಉಪ-ಸಮಿತಿಗಳು.-** (1) ಪ್ರಾಧಿಕಾರವು, ಯಾವುದೇ ನಿರ್ದಿಷ್ಟ ಉದ್ದೇಶಕ್ಕಾಗಿ, ಆಯುಕ್ತರು ಅಧ್ಯಕ್ಷರಾಗಿರುವ ಮತ್ತು ಪ್ರತಿಯೊಂದು ಸಮಿತಿಯಲ್ಲಿ ಐವರಿಗೆ ಮೀರದಂತೆ ಇತರ ಸದಸ್ಯರಿರುವ ಒಂದು ಅಥವಾ ಹೆಚ್ಚಿನ ಉಪ-ಸಮಿತಿಗಳನ್ನು ರಚಿಸಬಹುದು.

(2) ಉಪ-ಸಮಿತಿಗಳು, ಪ್ರಾಧಿಕಾರವು ಪ್ರತ್ಯಾಯೋಜಿಸಿದಂಥ ಪ್ರಾಧಿಕಾರದ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಮತ್ತು ಅಂಥ ಕರ್ತವ್ಯಗಳನ್ನು ನಿರ್ವಹಿಸತಕ್ಕದ್ದು.

(3) ಪ್ರತಿಯೊಂದು ಉಪ-ಸಮಿತಿಯು ತಿಂಗಳಿಗೆ ಕನಿಷ್ಠಪಕ್ಷ ಒಂದು ಸಲವಾದರೂ ಸಭೆ ಸೇರತಕ್ಕದ್ದು ಮತ್ತು ವಿನಿಯಮಗಳಿಂದ ಉಪಬಂಧಿಸಬಹುದಾದಂತೆ ಅದರ ಸಭೆಯ ಕಾರ್ಯಕಲಾಪಗಳಿಗೆ ಸಂಬಂಧಿಸಿದ ಅಂಥ ಪ್ರಕ್ರಿಯಾ ನಿಯಮಗಳನ್ನು ಪಾಲಿಸತಕ್ಕದ್ದು.

**10. ಆಯುಕ್ತರ ನೇಮಕಾತಿ.-** (1) ರಾಜ್ಯ ಸರ್ಕಾರವು, ಸರ್ಕಾರದ ಕೆ.ಎ.ಎಸ್ (ಕಿರಿಯ ಶ್ರೇಣಿ) ಅಧಿಕಾರಿಯ ದರ್ಜೆಗೆ ಕಡಿಮೆಯಲ್ಲದ ದರ್ಜೆಯ ಅಧಿಕಾರಿಯನ್ನು ಪ್ರಾಧಿಕಾರದ ಆಯುಕ್ತರಾಗಿ ನೇಮಿಸತಕ್ಕದ್ದು.

(2) ಆಯುಕ್ತರು, ರಾಜ್ಯ ಸರ್ಕಾರವು ಕಾಲಕಾಲಕ್ಕೆ ನಿರ್ಧರಿಸಬಹುದಾದಂಥ ವೇತನ ಮತ್ತು ಇತರ ಭತ್ಯೆಗಳನ್ನು ಪಡೆಯತಕ್ಕದ್ದು.

(3) ರಾಜ್ಯ ಸರ್ಕಾರವು, ಕಾಲಕಾಲಕ್ಕೆ ತಾನು ಯುಕ್ತವೆಂದು ಭಾವಿಸುವಂಥ ಅವಧಿಗೆ ಆಯುಕ್ತರಿಗೆ ರಜೆಯನ್ನು ಮಂಜೂರು ಮಾಡಬಹುದು.

**11. ಆಯುಕ್ತರ ಅಧಿಕಾರಗಳು ಮತ್ತು ಕರ್ತವ್ಯಗಳು.-** (1) ಆಯುಕ್ತರು, ಪ್ರಾಧಿಕಾರದ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮತ್ತು ಆಡಳಿತಾಧಿಕಾರಿಯಾಗಿರತಕ್ಕದ್ದು.

(2) ಆಯುಕ್ತರು, ಈ ಅಧಿನಿಯಮದ ಮೂಲಕ ಅಥವಾ ಅದರ ಅಡಿಯಲ್ಲಿ ಅಥವಾ ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನ ಅಡಿಯಲ್ಲಿ ತನಗೆ ಪ್ರದತ್ತವಾಗಿರುವಂಥ ಪ್ರಕಾರ್ಯಗಳನ್ನು ನೆರವೇರಿಸುವುದರ ಜೊತೆಗೆ,-

(ಎ) ಪ್ರಾಧಿಕಾರದ ನಿರ್ಣಯಗಳನ್ನು ಕಾರ್ಯಗತಗೊಳಿಸತಕ್ಕದ್ದು;

(ಬಿ) ಪ್ರಾಧಿಕಾರದ ವ್ಯವಹಾರಗಳನ್ನು ನಿರ್ವಹಿಸಿಕೊಂಡು ಬರತಕ್ಕದ್ದು ಮತ್ತು ಪತ್ರ ವ್ಯವಹಾರವನ್ನು ನಡೆಸಿಕೊಂಡು ಬರತಕ್ಕದ್ದು;

(ಸಿ) ಸರ್ಕಾರವು ನಿರ್ದೇಶಿಸಬಹುದಾದಂಥ ಯೋಜನೆಗಳನ್ನು ಮತ್ತು ಕಾಮಗಾರಿಗಳನ್ನು ನೆರವೇರಿಸಿ ಕಾರ್ಯಗತಗೊಳಿಸತಕ್ಕದ್ದು ಮತ್ತು ಆ ಬಗ್ಗೆ ಅವಶ್ಯವಾಗುವ ವೆಚ್ಚಗಳನ್ನು ಮಾಡತಕ್ಕದ್ದು;

(ಡಿ) ಪ್ರಾಧಿಕಾರದ ಯೋಜನೆಗಳ ಅನುಷ್ಠಾನಕ್ಕೆ ಜವಾಬ್ದಾರರಾಗಿರತಕ್ಕದ್ದು;

(ಇ) ಪ್ರಾಧಿಕಾರದ ಬ್ಯಾಂಕ್ ಖಾತೆಗಳನ್ನು ನಿರ್ವಹಿಸತಕ್ಕದ್ದು ಮತ್ತು ಮಂಡಲಿಯ ಲೆಕ್ಕಪತ್ರಗಳನ್ನು ಇಟ್ಟುಕೊಂಡು ಬರಲು ಜವಾಬ್ದಾರರಾಗಿರತಕ್ಕದ್ದು;

(ಎಫ್) ಪ್ರಾಧಿಕಾರದ ಅಧಿಕಾರಿಗಳು ಮತ್ತು ನೌಕರರ ಮೇಲೆ ಕಾರ್ಯನಿರ್ವಹಣೆ, ಆಡಳಿತ ವಿಷಯಗಳು ಮತ್ತು ಅಂಥ ಅಧಿಕಾರಿಗಳು ಮತ್ತು ನೌಕರರ ಸೇವಾ ವಿಷಯಗಳು ಹಾಗೂ ಅವರ ವೇತನ ಮತ್ತು ಭತ್ಯೆಗಳನ್ನು ವಿನಿಯಮನಗೊಳಿಸುವ ಬಗ್ಗೆ ಮೇಲ್ವಿಚಾರಣೆ ಹಾಗೂ ನಿಯಂತ್ರಣವನ್ನು ಹೊಂದಿರತಕ್ಕದ್ದು;

(ಜಿ) ಪ್ರಾಧಿಕಾರದ ನಡವಳಿಗಳ ಸಂಕ್ಷಿಪ್ತ ಟಿಪ್ಪಣಿಗಳ ಮತ್ತು ಯಾವುದೇ ವಿವರಪತ್ರದ ಪ್ರತಿಯನ್ನು ಅಥವಾ ರಾಜ್ಯ ಸರ್ಕಾರವು ಕಾಲಕಾಲಕ್ಕೆ ಕೋರಬಹುದಾದ ಇತರ ಮಾಹಿತಿಯನ್ನು ರಾಜ್ಯ ಸರ್ಕಾರಕ್ಕೆ ಒದಗಿಸತಕ್ಕದ್ದು.

(ಎಚ್) ಈ ಅಧಿನಿಯಮದ ಅಥವಾ ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಇತರ ಕಾನೂನಿನ ಮೂಲಕ ಅಥವಾ ಅದರಡಿಯಲ್ಲಿ ತನಗೆ ಪ್ರದತ್ತವಾಗುವಂಥ ಇತರ ಕರ್ತವ್ಯಗಳನ್ನು ನಿರ್ವಹಿಸತಕ್ಕದ್ದು.

**12. ಪ್ರಾಧಿಕಾರದ ನೌಕರರು.-** (1) ನಿಯಮಿಸಬಹುದಾದಂಥ ನಿಯಮಗಳಿಗೊಳಪಟ್ಟು, ಪ್ರಾಧಿಕಾರವು, ಅಧಿನಿಯಮದ ಪರಿಣಾಮಕಾರಿ ಅನುಷ್ಠಾನಕ್ಕಾಗಿ ಅದು ಅವಶ್ಯಕವೆಂದು ಭಾವಿಸುವಂಥ ಸಂಖ್ಯೆಯ ನೌಕರರನ್ನು ನೇಮಕ ಮಾಡಿಕೊಳ್ಳಬಹುದು:

ಪರಂತು, ರಾಜ್ಯ ಸರ್ಕಾರವು ಭಾರತೀಯ ಲೆಕ್ಕಪರಿಶೋಧನೆ ಮತ್ತು ಲೆಕ್ಕ ಪತ್ರ ಸೇವೆಯಿಂದ ಅಥವಾ ಕರ್ನಾಟಕ ರಾಜ್ಯ ಲೆಕ್ಕಪರಿಶೋಧನೆ ಮತ್ತು ಲೆಕ್ಕಪತ್ರ ಸೇವೆಯ ``ಎ'' ಗುಂಪಿನ ಕಿರಿಯ ವೇತನ ಶ್ರೇಣಿಯ ದರ್ಜೆಗಿಂತ ಕಡಿಮೆಯಲ್ಲದ ದರ್ಜೆಯ ಅಧಿಕಾರಿಯನ್ನು ನಿಯೋಜನೆಯ ಮೇಲೆ ಹಣಕಾಸು ಮತ್ತು ಲೆಕ್ಕಪತ್ರ ನಿಯಂತ್ರಣಾಧಿಕಾರಿಯಾಗಿ ನೇಮಕ ಮಾಡತಕ್ಕದ್ದು.

(2) ಹಣಕಾಸು ಮತ್ತು ಲೆಕ್ಕಪತ್ರ ನಿಯಂತ್ರಣಾಧಿಕಾರಿಯು ಆಯುಕ್ತರಿಗೆ ವರದಿ ಸಲ್ಲಿಸತಕ್ಕದ್ದು ಮತ್ತು ಅವರು ಹಣಕಾಸು ನಿಯಮಗಳನ್ನು ಪಾಲಿಸಿಕೊಂಡು ಬರುವಂತೆ ಹಾಗೂ ಪ್ರಾಧಿಕಾರದ ಹಣಕಾಸು ವ್ಯವಹಾರಗಳ ಬಗ್ಗೆ ವಾಸ್ತವಿಕವಾದ ಹಾಗೂ ನ್ಯಾಯವಾದ ಚಿತ್ರಣವನ್ನು ನೀಡುವ ರೀತಿಯಲ್ಲಿ ಲೆಕ್ಕಪತ್ರಗಳನ್ನು ಅಂದಂದಿನವರೆಗೆ ನಿರ್ವಹಿಸಿಕೊಂಡು ಬರುವಂತೆ ನೋಡಿಕೊಳ್ಳತಕ್ಕದ್ದು.

(3) (1)ನೇ ಉಪ-ಪ್ರಕರಣದಲ್ಲಿ ಉಲ್ಲೇಖಿಸಲಾದ ನೌಕರರ ವೇತನಗಳು, ಭತ್ಯೆಗಳು ಮತ್ತು ಇತರ ಸೇವಾ ಷರತ್ತುಗಳು ನಿಯಮಿಸಬಹುದಾದಂತೆ ಇರತಕ್ಕದ್ದು.

(4) ಆಯುಕ್ತರು, ಪ್ರಾಧಿಕಾರದ ನೌಕರರಿಗೆ ಸಂಬಂಧಿಸಿದಂತೆ ನೇಮಕಾತಿ ಅಧಿಕಾರಿಯಾಗಿರತಕ್ಕದ್ದು ಮತ್ತು ಪ್ರಾಧಿಕಾರದ ಸಿಬ್ಬಂದಿಯ ಮೇಲೆ ಸಾಮಾನ್ಯ ನಿಯಂತ್ರಣ ಮತ್ತು ಮೇಲ್ವಿಚಾರಣೆಯನ್ನು ಹೊಂದಿರತಕ್ಕದ್ದು.

**13. ಪ್ರಾಧಿಕಾರದ ಅಡಿಯಲ್ಲಿನ ಸೇವೆಗೆ ಸಾಮಾನ್ಯ ಅನರ್ಹತೆಗಳು.-** ಯಾವ ವ್ಯಕ್ತಿಯೂ, ಪ್ರಾಧಿಕಾರದ ಅಧಿಕಾರಿ ಅಥವಾ ನೌಕರನಾಗಿ ಅಲ್ಲದೆ, ಖುದ್ದಾಗಿ ಅಥವಾ ತನ್ನ ಪಾಲುದಾರನ ಮೂಲಕ ಅಥವಾ ತನ್ನ ಏಜಂಟನ ಮೂಲಕ ಪ್ರಾಧಿಕಾರದ ಯಾವುದೇ ಷೇರನ್ನು ಹೊಂದಿದ್ದರೆ ಅಥವಾ ಪ್ರಾಧಿಕಾರವು ಮಾಡಿಕೊಂಡ ಇಲ್ಲವೇ ಅದರ ಪರವಾಗಿ ಮಾಡಿಕೊಂಡ ಯಾವುದೇ ಕರಾರಿನಲ್ಲಿ ಅಥವಾ ಪ್ರಾಧಿಕಾರದ ಅಡಿಯಲ್ಲಿನ ಯಾವುದೇ ನಿಯೋಜನೆಯಲ್ಲಿ ಹಿತಾಸಕ್ತಿಯನ್ನು ಹೊಂದಿದ್ದರೆ ಆತನು ಪ್ರಾಧಿಕಾರದ ಅಧಿಕಾರಿ ಅಥವಾ ಉದ್ಯೋಗಿಯಾಗತಕ್ಕದ್ದಲ್ಲ ಅಥವಾ ಆಗಿರತಕ್ಕದ್ದಲ್ಲ.

**14. ಪ್ರಾಧಿಕಾರದ ಸಭೆಗಳು.-** (1) ಆಯುಕ್ತರು ಅಧ್ಯಕ್ಷರ ಪೂರ್ವಾನುಮತಿಯೊಂದಿಗೆ ಮತ್ತು ಅಧ್ಯಕ್ಷರು ಯುಕ್ತವೆಂದು ಭಾವಿಸಬಹುದಾದಂಥ ಅವಧಿಗಳ ಅಂತರದಲ್ಲಿ ಮತ್ತು ಅಧ್ಯಕ್ಷರು ನಿರ್ಧರಿಸಬಹುದಾದಂಥ ಸ್ಥಳದಲ್ಲಿ ಪ್ರಾಧಿಕಾರದ ಸಭೆಗಳನ್ನು ನಡೆಸತಕ್ಕದ್ದು:

ಪರಂತು, ಪ್ರಾಧಿಕಾರವು ಒಂದು ಕ್ಯಾಲೆಂಡರ್ ವರ್ಷದಲ್ಲಿ ಕನಿಷ್ಠ ಪಕ್ಷ ಎರಡು ಬಾರಿಯಾದರೂ ಸಭೆ ಸೇರತಕ್ಕದ್ದು.

(2) ಪ್ರತಿಯೊಂದು ಸಭೆಯಲ್ಲೂ ಅಧ್ಯಕ್ಷರು ಅಧ್ಯಕ್ಷತೆ ವಹಿಸತಕ್ಕದ್ದು ಮತ್ತು ಯಾವುದೇ ಕಾರಣದಿಂದಾಗಿ ಅಧ್ಯಕ್ಷರಿಗೆ ಯಾವುದೇ ಸಭೆಗೆ ಹಾಜರಾಗಲು ಸಾಧ್ಯವಾಗದಿದ್ದರೆ, ಉಪಾಧ್ಯಕ್ಷರು ಅಥವಾ ಸಭೆಯಲ್ಲಿ ಹಾಜರಿರುವ ಸದಸ್ಯರು ತಮ್ಮ ಪೈಕಿ ಆಯ್ಕೆ ಮಾಡುವಂಥ ಯಾವೊಬ್ಬ ಇತರ ಸದಸ್ಯರು ಸಭೆಯ ಅಧ್ಯಕ್ಷತೆ ವಹಿಸತಕ್ಕದ್ದು.

(3) ಪ್ರಾಧಿಕಾರದ ತೀರ್ಮಾನಗಳನ್ನು, ಹಾಜರಿದ್ದು ಮತ ಹಾಕುವ ಸದಸ್ಯರ ಅವಿರೋಧ ಸಮ್ಮತಿಸೂಚಕ ಮತದ ಮೂಲಕ ಕೈಗೊಳ್ಳತಕ್ಕದ್ದು. ಪ್ರಾಧಿಕಾರದ ಮುಂದೆ ತೀರ್ಮಾನಕ್ಕಾಗಿ ಬಂದ, ಯಾವುದೇ ನಿರ್ದಿಷ್ಟ ವಿಷಯದ ಬಗ್ಗೆ ಯಾವುವೇ ಭಿನ್ನಾಭಿಪ್ರಾಯಗಳಿದ್ದಲ್ಲಿ, ಆಯುಕ್ತರು ಆ ವಿಷಯವನ್ನು ರಾಜ್ಯ ಸರ್ಕಾರಕ್ಕೆ ಕಳುಹಿಸತಕ್ಕದ್ದು ಮತ್ತು ಅಂಥ ವಿಷಯಗಳ ಬಗ್ಗೆ ರಾಜ್ಯ ಸರ್ಕಾರದ ತೀರ್ಮಾನವು ಅಂತಿಮವಾಗಿರತಕ್ಕದ್ದು.

(4) ಆಯುಕ್ತರು ಪ್ರಾಧಿಕಾರದ ತೀರ್ಮಾನಗಳನ್ನು ಕಾರ್ಯಗತಗೊಳಿಸತಕ್ಕದ್ದು:

ಪರಂತು, ಪ್ರಾಧಿಕಾರದ ಯಾವುದೇ ನಿರ್ಣಯವು, ಈ ಅಧಿನಿಯಮದ ಅಥವಾ ಯಾವುದೇ ಇತರ ಕಾನೂನಿನ ಉಪಬಂಧವನ್ನು ಅಥವಾ ಈ ಅಧಿನಿಯಮದ ಅಥವಾ ಇತರ ಯಾವುದೇ ಕಾನೂನಿನ ಅಡಿಯಲ್ಲಿ ರಚಿಸಲಾದ ಅಥವಾ ಹೊರಡಿಸಿದ ಯಾವುದೇ ನಿಯಮ ಅಥವಾ ಅಧಿಸೂಚನೆ ಅಥವಾ ವಿನಿಯಮಗಳ ಉಪಬಂಧಗಳನ್ನು ಅಥವಾ ರಾಜ್ಯಸರ್ಕಾರವು ಹೊರಡಿಸಿದ ಯಾವುದೇ ಆದೇಶವನ್ನು ಉಲ್ಲಂಘಿಸುತ್ತದೆಯೆಂದು ಅಥವಾ ಪ್ರಾಧಿಕಾರದ ಹಿತಾಸಕ್ತಿಗೆ ಅಥವಾ ಬಸವನಬಾಗೇವಾಡಿ ಕ್ಷೇತ್ರದ ಅಭಿವೃದ್ಧಿ ಮತ್ತು ನಿರ್ವಹಣೆಗೆ ಧಕ್ಕೆ ಉಂಟುಮಾಡುತ್ತದೆ ಅಥವಾ ಹಾನಿಕರವಾಗುತ್ತದೆಂದು ಆಯುಕ್ತರು ಅಭಿಪ್ರಾಯ ಪಟ್ಟರೆ ಅವರು ನಿರ್ಣಯವನ್ನು ಅನುಮೋದಿಸಿದ ಹದಿನೈದು ದಿನಗಳ ಒಳಗಾಗಿ, ವಿಷಯದ ಬಗ್ಗೆ ಆದೇಶಗಳನ್ನು ಕೋರಿ ಅದನ್ನು ರಾಜ್ಯ ಸರ್ಕಾರಕ್ಕೆ ಕಳುಹಿಸಿಕೊಡತಕ್ಕದ್ದು ಮತ್ತು ಪ್ರಾಧಿಕಾರದ ಮುಂದಿನ ಸಭೆಯಲ್ಲಿ ತಾನು ಕೈಗೊಂಡ ಕ್ರಮದ ಬಗ್ಗೆ ಪ್ರಾಧಿಕಾರಕ್ಕೆ ತಿಳಿಸತಕ್ಕದ್ದು ಮತ್ತು ಆಯುಕ್ತರು ಕಳುಹಿಸಿಕೊಟ್ಟ ಅಂಥ ವಿಷಯದ ಬಗ್ಗೆ ರಾಜ್ಯ ಸರ್ಕಾರವು ಆದೇಶವನ್ನು ನೀಡುವವರೆಗೆ, ಆಯುಕ್ತರು ಆ ನಿರ್ಣಯವನ್ನು ಜಾರಿಗೆ ತರಲು ಬದ್ಧರಲ್ಲ.

(5) ಪ್ರಾಧಿಕಾರವು, ವಿನಿಯಮಗಳ ಮೂಲಕ ತನ್ನ ಸಭೆಗಳ ಕಾರ್ಯಕಲಾಪಗಳಿಗೆ ಸಂಬಂಧಪಟ್ಟಂತೆ ಈ ಅಧಿನಿಯಮದ ಉಪಬಂಧಗಳಿಗೆ ಮತ್ತು ನಿಯಮಗಳಿಗೆ ಅಸಂಗತವಾಗದಂತಹ ಕಾರ್ಯವಿಧಾನಗಳನ್ನು ಗೊತ್ತುಪಡಿಸಬಹುದು.

**15. ವ್ಯವಹರಣೆಗಳು ಸರಿಯಾದುವೆಂದು ಮತ್ತು ಊರ್ಜಿತವಾದವೆಂದು ಪೂರ್ವಭಾವನೆ ಮಾಡುವುದು.-** ಪ್ರಾಧಿಕಾರದ ಯಾವುದೇ ಕೃತ್ಯ ಅಥವಾ ವ್ಯವಹರಣೆಯು ಅನ್ಯಥಾ ಈ ಅಧಿನಿಯಮದ ಉಪಬಂಧಗಳಿಗೆ ಅನುಸಾರವಾಗಿದ್ದರೆ, ಅಧ್ಯಕ್ಷರಾಗಿ ಅಥವಾ ಸದಸ್ಯರಾಗಿ ಕಾರ್ಯನಿರ್ವಹಿಸುವ ಯಾವೊಬ್ಬ ವ್ಯಕ್ತಿಯ ಅನರ್ಹತೆ ಅಥವಾ ನೇಮಕಾತಿಯಲ್ಲಿನ ನ್ಯೂನತೆಯು, ಅಂಥ ಕೃತ್ಯ ಅಥವಾ ವ್ಯವಹರಣೆಯನ್ನು ದೂಷಿತಗೊಳಿಸುತ್ತದೆಯೆಂದು ಭಾವಿಸತಕ್ಕದ್ದಲ್ಲ.

**16. ಸುತ್ತೋಲೆಯ ಮೂಲಕ ಪ್ರಾಧಿಕಾರದ ತೀರ್ಮಾನಗಳನ್ನು ಸೂಚಿಸುವುದು.-** (1) ಅಧ್ಯಕ್ಷರು, ಯಾವುದೇ ಪ್ರಕರಣವನ್ನು ಪ್ರಾಧಿಕಾರದ ಒಂದು ಸಭೆಯಲ್ಲಿ ಚರ್ಚೆಗೆ ತರುವುದಕ್ಕೆ ಬದಲಾಗಿ, ನಿಯಮಿಸಲಾದ ನಮೂನೆಯಲ್ಲಿ ಒಂದು ಟಿಪ್ಪಣಿಯನ್ನು ಪ್ರಾಧಿಕಾರದ ಸದಸ್ಯರ ನಡುವೆ ಆ ಬಗ್ಗೆ ಅವರ ಅಭಿಪ್ರಾಯ ಕೋರಿ ಪರಿಚಲನೆ ಮಾಡಿಸಲು ನಿರ್ದೇಶಿಸಬಹುದು. ಹಾಗೆ ಪರಿಚಲನೆ ಮಾಡಲಾದ ಟಿಪ್ಪಣಿಯಲ್ಲಿರುವ ಪ್ರಸ್ತಾವವನ್ನು ಎಲ್ಲ ಸದಸ್ಯರು ಅವಿರೋಧವಾಗಿ ಅನುಮೋದಿಸಿದರೆ ಅದನ್ನು ಪ್ರಾಧಿಕಾರದ ಸಮ್ಮತಿಸೂಚಕ ನಿರ್ಣಯವೆಂಬುದಾಗಿ ಭಾವಿಸತಕ್ಕದ್ದು ಮತ್ತು ತದನುಸಾರವಾಗಿ ಮುಂದಿನ ಕ್ರಮ ಕೈಗೊಳ್ಳತಕ್ಕದ್ದು. ಪ್ರಾಧಿಕಾರದ ತೀರ್ಮಾನಕ್ಕಾಗಿ ಪರಿಚಲನೆ ಮಾಡಲಾದ ಯಾವುದೇ ನಿರ್ದಿಷ್ಟ ವಿಷಯದ ಬಗ್ಗೆ ಯಾವುದೇ ಭಿನ್ನಾಭಿಪ್ರಾಯ ವ್ಯಕ್ತವಾದರೆ ಆಯುಕ್ತರು, ಆ ವಿಷಯವನ್ನು, ರಾಜ್ಯ ಸರ್ಕಾರಕ್ಕೆ ಕಳುಹಿಸತಕ್ಕದ್ದು ಮತ್ತು ಆ ಬಗ್ಗೆ ರಾಜ್ಯಸರ್ಕಾರದ ತೀರ್ಮಾನವು ಅಂತಿಮವಾಗಿರತಕ್ಕದ್ದು.

(2) (1)ನೇ ಉಪ-ಪ್ರಕರಣದ ಅಡಿಯಲ್ಲಿ ಅಭಿಪ್ರಾಯಕ್ಕಾಗಿ ಪರಿಚಲನೆ ಮಾಡಲಾದ ಪ್ರಕರಣಗಳ ಸಂದರ್ಭಗಳಲ್ಲಿ ಯಾವೊಬ್ಬ ಸದಸ್ಯರು ಟಿಪ್ಪಣಿಯಲ್ಲಿ ನಿರ್ದಿಷ್ಟಪಡಿಸಿರುವ ದಿನಾಂಕದೊಳಗೆ ತಮ್ಮ

ಅಭಿಪ್ರಾಯವನ್ನು ತಿಳಿಸಲು ತಪ್ಪಿದರೆ, ಅಂಥ ಸದಸ್ಯರು ಸುತ್ತೋಲೆಯಾಗಿ ಕಳುಹಿಸಲಾದ ಆ ಟಿಪ್ಪಣಿಯಲ್ಲಿ ಒಳಗೊಂಡ ಪ್ರಸ್ತಾವವನ್ನು ಒಪ್ಪಿಕೊಂಡಿದ್ದಾರೆಂದು ಭಾವಿಸತಕ್ಕದ್ದು.

(3) 14ನೇ ಪ್ರಕರಣದ ಉಪಬಂಧಗಳು ಯಥೋಚಿತ ವ್ಯತ್ಯಾಸಗಳೊಂದಿಗೆ ಈ ಪ್ರಕರಣದ ಅಡಿಯಲ್ಲಿ ಪರಿಚಲನೆ ಮೂಲಕ ಕೈಗೊಂಡ, ಪ್ರಾಧಿಕಾರದ ತೀರ್ಮಾನಗಳಿಗೆ ಅನ್ವಯವಾಗತಕ್ಕದ್ದು.

**17. ಕೆಲವೊಂದು ತೀರ್ಮಾನಗಳನ್ನು ಕೈಗೊಳ್ಳಲು ಅಧ್ಯಕ್ಷರ ಅಧಿಕಾರ.-** ಯಾವೊಂದು ವಿಷಯವು, 14ನೇ ಪ್ರಕರಣದ ಅಡಿಯಲ್ಲಿ ಪ್ರಾಧಿಕಾರದ ಸಭೆ ಕರೆಯಲು ಅಗತ್ಯಪಡಿಸುವಷ್ಟು ಅಥವಾ 16ನೇ ಪ್ರಕರಣದ ಅಡಿಯಲ್ಲಿ ಪರಿಚಲನೆಯ ಮೂಲಕ ಪ್ರಾಧಿಕಾರವು ತೀರ್ಮಾನಿಸುವವರೆಗೂ ಕಾಯಲು ಸಾಧ್ಯವಾಗದಷ್ಟು ತುರ್ತು ಸ್ವರೂಪದ್ದಾಗಿದೆಯೆಂದು ಅಥವಾ ವಿಷಯವು ಗಹನವಾದುದಲ್ಲವೆಂದು ಅಧ್ಯಕ್ಷರು ಅಭಿಪ್ರಾಯಪಟ್ಟಲ್ಲಿ, ತಾವು ಯುಕ್ತವೆಂದು ಭಾವಿಸುವಂಥ ಆದೇಶಗಳನ್ನು ಅವರು ನೀಡಬಹುದು ಮತ್ತು ಅದನ್ನು ಪ್ರಾಧಿಕಾರದ ತೀರ್ಮಾನಗಳ ರೀತಿಯಲ್ಲಿಯೇ ಅನುಷ್ಠಾನಗೊಳಿಸತಕ್ಕದ್ದು:

ಪರಂತು ಈ ಪ್ರಕರಣದ ಅಡಿಯಲ್ಲಿ ಅಧ್ಯಕ್ಷರು ಕೈಗೊಂಡ ಪ್ರತಿಯೊಂದು ತೀರ್ಮಾನವನ್ನು ಪ್ರಾಧಿಕಾರದ ಮುಂದೆ ಅದರ ಮುಂದಿನ ಸಭೆಯಲ್ಲಿ ಮಂಡಿಸತಕ್ಕದ್ದು.

## ಅಧ್ಯಾಯ - III

## ಬಸವನಬಾಗೇವಾಡಿಯ ಅಭಿವೃದ್ಧಿ ಮತ್ತು ನಿರ್ವಹಣೆ

**18. ಬಸವನಬಾಗೇವಾಡಿಯಲ್ಲಿಯ ಪರಂಪರಾ ತಾಣಗಳು.-** (1) ಯಾವುದೇ ಪದ್ಧತಿ, ಸಂಪ್ರದಾಯ, ರೂಢಿಯಲ್ಲಿ ಅಥವಾ ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನ ಅಡಿಯಲ್ಲಿ ಸೃಜಿಸಲಾದ ಮತ್ತು ಅಸ್ತಿತ್ವದಲ್ಲಿರುವ ನ್ಯಾಸದ ನಿಬಂಧನೆಗಳಲ್ಲಿ ಏನೇ ಇದ್ದರೂ, ಅನುಸೂಚಿಯಲ್ಲಿ ನಿರ್ದಿಷ್ಟಪಡಿಸಿದ ಬಸವನಬಾಗೇವಾಡಿಯಲ್ಲಿರುವ ಎಲ್ಲಾ ಅಥವಾ ಯಾವುವೇ ಪರಂಪರೆಯ ತಾಣಗಳ ಸಂಪೂರ್ಣ ನಿಯಂತ್ರಣ, ಒಡೆತನ, ಆಡಳಿತ ವ್ಯವಸ್ಥೆ ಮತ್ತು ಮೇಲ್ವಿಚಾರಣೆಯನ್ನು ಈಗಾಗಲೇ ರಾಜ್ಯಸರ್ಕಾರದಲ್ಲಿ ಅದು ನಿಹಿತವಾಗಿರದಿದ್ದರೆ ರಾಜ್ಯಸರ್ಕಾರವು ಭೂಸ್ವಾಧೀನ, ಪುನರ್ವಸತಿ ಮತ್ತು ಪುನರ್ವ್ಯವಸ್ಥೆಯಲ್ಲಿ ನ್ಯಾಯೋಚಿತ ನಷ್ಟಪರಿಹಾರ ಮತ್ತು ಪಾರದರ್ಶಕತೆ ಹಕ್ಕು ಅಧಿನಿಯಮ, 2013 (2013ರ ಕೇಂದ್ರ ಅಧಿನಿಯಮ 30)ರ ಅನುಸಾರವಾಗಿ ಸ್ವಾಧೀನಪಡಿಸಿಕೊಳ್ಳತಕ್ಕದ್ದು ಮತ್ತು ಆ ತರುವಾಯ ರಾಜ್ಯಸರ್ಕಾರವು ಅಧಿಸೂಚಿಸಿದ ದಿನಾಂಕದಿಂದ ಅದು ಪ್ರಾಧಿಕಾರಕ್ಕೆ ವರ್ಗಾವಣೆಯಾಗತಕ್ಕದ್ದು:

(2) ರಾಜ್ಯ ಸರ್ಕಾರವು, ತಾತ್ಕಾಲಿಕ ಉಪಬಂಧಗಳನ್ನು ಕಲ್ಪಿಸುವುದು ಅವಶ್ಯವೆಂದು ಭಾವಿಸಿದರೆ, ಅದು ಸಾಮಾನ್ಯ ಅಥವಾ ವಿಶೇಷ ಆದೇಶದ ಮೂಲಕ ತಾತ್ಕಾಲಿಕ ಉಪಬಂಧಗಳನ್ನು ರಚಿಸಬಹುದು.

**19. ಅನುಸೂಚಿಯ ತಿದ್ದುಪಡಿಗೆ ಅಧಿಕಾರ.-** ರಾಜ್ಯ ಸರ್ಕಾರವು ಅಧಿಸೂಚನೆಯ ಮೂಲಕ, ನಿಯಮಿಸಬಹುದಾದಂಥ ಕಾರ್ಯವಿಧಾನವನ್ನು ಅನುಸರಿಸಿದ ತರುವಾಯ ಅನುಸೂಚಿಯಲ್ಲಿ ಯಾವುದೇ ನಮೂದನ್ನು ಸೇರಿಸಿ ಅಥವಾ ಮಾರ್ಪಡಿಸಿ ಅದನ್ನು ತಿದ್ದುಪಡಿಮಾಡಬಹುದು.

**20. ಅಭಿವೃದ್ಧಿ ಯೋಜನೆಯನ್ನು ಸಿದ್ಧಪಡಿಸುವುದು, ಅದರ ಅನುಮೋದನೆ ಹಾಗೂ ಅದನ್ನು ಕಾರ್ಯಗತಗೊಳಿಸುವುದು.-** (1) ಪ್ರಾಧಿಕಾರವು, ಅದರ ರಚನೆಯಾದ ಮೇಲೆ, ಆದಷ್ಟು ಬೇಗನೆ ಬಸವನಬಾಗೇವಾಡಿಯನ್ನು ಅಂತಾರಾಷ್ಟ್ರೀಯ ಯಾತ್ರಾ ಸ್ಥಳವನ್ನಾಗಿ ಮತ್ತು ಸಾಂಸ್ಕೃತಿಕ ಹಾಗೂ ಪ್ರವಾಸಿ ಕೇಂದ್ರವನ್ನಾಗಿ ಹಾಗೂ ಪ್ರಚಾರದ ಕೇಂದ್ರವನ್ನಾಗಿ ಮಾಡಿ ಅಭಿವೃದ್ಧಿಗೊಳಿಸಲು ಯೋಜನೆಯನ್ನು ಸಿದ್ಧಪಡಿಸತಕ್ಕದ್ದು. ಅಭಿವೃದ್ಧಿ ಯೋಜನೆಯು ಈ ಮುಂದಿನವುಗಳನ್ನು ಒಳಗೊಂಡಿರಬಹುದು, ಎಂದರೆ:-

(ಎ) ಯಾವುದೇ ಪರಂಪರಾ ತಾಣದ ಅಥವಾ ಕಟ್ಟಡಗಳ ಸಂರಕ್ಷಣೆ ಮತ್ತು ಅದರ ಜೀರ್ಣೋದ್ಧಾರಕ್ಕಾಗಿ ಕಾರ್ಯಕ್ರಮಗಳು;

(ಬಿ) ಪ್ರಾಧಿಕಾರದ ಅಭಿಪ್ರಾಯದಲ್ಲಿ ಅಭಿವೃದ್ಧಿ ಯೋಜನೆಯನ್ನು ಕಾರ್ಯಗತಗೊಳಿಸಲು ಅವಶ್ಯವಾದ ಭೂಮಿಯನ್ನು, ಭೂಸ್ವಾಧೀನ ಅಥವಾ ಖರೀದಿ ಅಥವಾ ವಿನಿಮಯದ ಮೂಲಕ ಅಥವಾ ಅನ್ಯಥಾ ಸ್ವಾಧೀನಪಡಿಸಿ ಕೊಳ್ಳುವುದಕ್ಕಾಗಿ ಪ್ರಸ್ತಾವಗಳು;

(ಸಿ) ಸಾರ್ವಜನಿಕ ಉದ್ಯಾನವನಗಳು, ಫಲಪುಷ್ಪ ತೋಟಗಳು ಅಥವಾ ಮೃಗಾಲಯಗಳು, ಕಾರಂಜಿಗಳು, ಕೃತಕ ಜಲಪಾತಗಳು, ವನ್ಯಮೃಗ ಉದ್ಯಾನವನಗಳು, ದೋಣಿ ವಿಹಾರ ಅಥವಾ ಇತರ ಜಲ ಕ್ರೀಡಾ ಸೌಲಭ್ಯವಿರುವ ಸರೋವರಗಳನ್ನು ಅಥವಾ ಇಂಥವೇ ಪ್ರವಾಸಿಗಳಿಗೆ ಆಕರ್ಷಣೆಯನ್ನುಂಟುಮಾಡುವಂಥ ಇತರ ಕೇಂದ್ರಗಳನ್ನು ನಿರ್ಮಿಸುವುದು;

(ಡಿ) ವಿವಿಧ ವರ್ಗದ ಪ್ರವಾಸಿಗರ ಅವಶ್ಯಕತೆ ಪೂರೈಸಲು ಛತ್ರಗಳು, ವಸತಿ-ಗೃಹಗಳು, ಕುಟೀರಗಳು, ಹೋಟೆಲುಗಳು, ರೆಸ್ಟೋರೆಂಟ್‌ಗಳು ಮತ್ತು ಭೋಜನಾಲಯಗಳನ್ನು ನಿರ್ಮಿಸುವುದು;

(ಇ) ಅವಶ್ಯಕ ಸಾಲು ಅಂಗಡಿಗಳನ್ನು ಅಥವಾ ವಾಣಿಜ್ಯ-ಸಂಕೀರ್ಣಗಳನ್ನು ನಿರ್ಮಿಸುವುದು;

(ಎಫ್) ಅನುಭವ ಮಂಟಪದ ಮಾದರಿಯಲ್ಲಿ ಒಂದು ಸಭಾಂಗಣವನ್ನು ನಿರ್ಮಿಸುವುದು;

(ಜಿ) ಆಯಕಟ್ಟಿನ ಸ್ಥಳಗಳಲ್ಲಿ ಪ್ರಾರ್ಥನಾ ಮಂದಿರಗಳನ್ನು ಮತ್ತು ಧ್ಯಾನ ಮಂದಿರಗಳನ್ನು ನಿರ್ಮಿಸುವುದು;

(ಎಚ್) 2ನೇ ಪ್ರಕರಣದಲ್ಲಿ ಪರಿಭಾಷಿಸಲಾದಂತೆ ಸೌಕರ್ಯಗಳನ್ನು ಕಲ್ಪಿಸುವುದು;

(ಐ) ಕಟ್ಟಡಗಳ ನಿರ್ಮಾಣ ಹಾಗೂ ಪುನರ್-ನಿರ್ಮಾಣವೂ ಸೇರಿದಂತೆ ಎಲ್ಲಾ ಅಥವಾ ಯಾವುದೇ ಭೂಮಿಯ ವಿನ್ಯಾಸ ಮತ್ತು ಮರು ವಿನ್ಯಾಸ;

(ಜೆ) ಚರಂಡಿ ವ್ಯವಸ್ಥೆ, ವಿದ್ಯುಚ್ಛಕ್ತಿ ಮತ್ತು ನೀರು ಪೂರೈಕೆ ಮತ್ತು ನೈರ್ಮಲ್ಯ ವ್ಯವಸ್ಥೆಯನ್ನು ಒದಗಿಸುವುದು;

(ಕೆ) ಪ್ರಾಧಿಕಾರವು, ಸಾಧಾರಣವಾಗಿ ತನ್ನ ಯೋಜನಾ ಕಾರ್ಯಕ್ಕೆ ಅನುಕೂಲವಾಗುವಂತೆ ಮತ್ತು ಮುಖ್ಯವಾಗಿ ನೀರು ಉತ್ತಮವಾಗಿ ಹರಿಯುವ ವ್ಯವಸ್ಥೆಯನ್ನು ಒದಗಿಸಲು, ಯಾವುದೇ ಭೂಮಿಯನ್ನು ಎತ್ತರಿಸುವುದು ಸೂಕ್ತವೆಂದು ಭಾವಿಸಿದರೆ ಅಂಥ ಭೂಮಿಯನ್ನು ಎತ್ತರಿಸುವುದು;

(ಎಲ್) ಬಸವನಬಾಗೇವಾಡಿಯಲ್ಲಿ ಅಥವಾ ಅದಕ್ಕೆ ಹೊಂದಿಕೊಂಡಂತಿರುವ ಪ್ರದೇಶದಲ್ಲಿ ಉತ್ತಮ ಗಾಳಿ-ಬೆಳಕು ದೊರಕುವಂತೆ ಖಾಲಿ ಜಾಗಗಳನ್ನು ಬಿಡುವುದು;

(ಎಮ್) ಜನರ ವಾಸಕ್ಕೆ ಯೋಗ್ಯವಲ್ಲದ ಹಾಗೂ ಅಭಿವೃದ್ಧಿ ಯೋಜನೆಗೆ ತಕ್ಕದಲ್ಲದ ಎಲ್ಲ ಕಟ್ಟಡಗಳನ್ನು ಕೆಡವುವುದು;

(ಎನ್) ಅಡಚಣೆಯನ್ನುಂಟುಮಾಡುವ ಕಟ್ಟಡಗಳನ್ನು ಅಥವಾ ಕಟ್ಟಡಗಳ ಭಾಗಗಳನ್ನು ಕೆಡವುವುದು;

(ಒ) ಕಟ್ಟಡಗಳ ನಿರ್ಮಾಣ ಮತ್ತು ಪುನರ್‌ನಿರ್ಮಾಣ, ಅವುಗಳನ್ನು ನಿರ್ವಹಿಸುವುದು ಮತ್ತು ಸಂರಕ್ಷಿಸುವುದು;

(ಪಿ) 25ನೇ ಪ್ರಕರಣದಲ್ಲಿನ ಉಪಬಂಧಗಳಿಗೆ ಒಳಪಟ್ಟು, ಯೋಜನೆಯಲ್ಲಿ ಸೇರಿರುವ ಯಾವುದೇ ಸ್ವತ್ತನ್ನು ಮಾರಾಟ ಮಾಡುವುದು, ಬಾಡಿಗೆಗೆ ಕೊಡುವುದು ಅಥವಾ ವಿನಿಮಯ ಮಾಡಿಕೊಳ್ಳುವುದು;

(ಕ್ಯೂ) ಪ್ರಾಧಿಕಾರದ ನೌಕರರಿಗೆ ವಸತಿ ಸೌಲಭ್ಯವನ್ನು ಒದಗಿಸುವುದು;

(ಆರ್) ಸಂಪರ್ಕ ಮತ್ತು ಸಾರಿಗೆ ಸೌಲಭ್ಯಗಳನ್ನು ಒದಗಿಸುವುದು;

(ಎಸ್) ಅಭಿವೃದ್ಧಿ ಯೋಜನೆಯ ಭೌಗೋಳಿಕ ಪ್ರದೇಶದಲ್ಲಿ ಈಗಿರುವ ಮತ್ತು ಮುಂದುವರಿಸಲು ಅನುಮತಿಸಬಹುದಾದಂಥ ಮತೀಯ ಸಂಸ್ಥೆಗಳೊಂದಿಗೆ, ಅವು ಅಭಿವೃದ್ಧಿ ಯೋಜನೆಯ ಪರಿಕಲ್ಪನೆಗೆ ಸರಿಹೊಂದುತ್ತಿರುವವರೆಗೆ ಹೊಂದಾಣಿಕೆಗಳು ಮತ್ತು ಒಪ್ಪಂದಗಳನ್ನು ಮಾಡಿಕೊಳ್ಳುವುದು;

(ಟಿ) ಬಸವನಬಾಗೇವಾಡಿಯನ್ನು ಸಾಂಸ್ಕೃತಿಕ ಕೇಂದ್ರವನ್ನಾಗಿ, ಯಾತ್ರಾಸ್ಥಳವನ್ನಾಗಿ ಮತ್ತು ಅಂತಾರಾಷ್ಟ್ರೀಯ ಪ್ರವಾಸಿ ಕೇಂದ್ರವನ್ನಾಗಿ ಮಾಡುವುದಕ್ಕಾಗಿ ಮತ್ತು ಸಂತ ಕವಿ ಬಸವಣ್ಣರ ಸಿದ್ಧಾಂತ ಚಿಂತನಗಳನ್ನು ಮಾತ್ರವಲ್ಲದೆ, ಅವರ ಸಮಕಾಲೀನರ ಹಾಗೂ ಶಿಷ್ಯರ ಸಿದ್ಧಾಂತ ಚಿಂತನಗಳ ವಿಚಾರ ಮಂಥನ ಮಾಡುವುದಕ್ಕಾಗಿ ಮತ್ತು ಸಂತ ಕವಿ ಬಸವಣ್ಣರ, ಅವರ ಸಮಕಾಲೀನರ ಮತ್ತು ಶಿಷ್ಯರ ಜೀವನ ಮತ್ತು ಬೋಧನೆಗಳಿಗೆ ಸಂಬಂಧಪಟ್ಟ ಇತರ ಮಹತ್ವದ ಸ್ಥಳಗಳ ಸಂರಕ್ಷಣೆ ಹಾಗೂ ಅಭಿವೃದ್ಧಿಗಾಗಿ ಹಾಗೂ ವಚನ ಸಾಹಿತ್ಯದ ಅಧ್ಯಯನಕ್ಕಾಗಿ ಶೈಕ್ಷಣಿಕ ಮತ್ತು ಸಂಶೋಧನಾ ಕೇಂದ್ರದ ಮತ್ತು ಆ ವಿಷಯಕ್ಕೆ ಸಂಬಂಧಪಟ್ಟಂತೆ ವಿಶಿಷ್ಟ ಗ್ರಂಥಾಲಯದ ಸ್ಥಾಪನೆಗಾಗಿ, ಯುಕ್ತ ಹಾಗೂ ಆನುಷಂಗಿಕವೆಂದು ಪ್ರಾಧಿಕಾರವು ಅಭಿಪ್ರಾಯಪಡುವಂಥ ಇತರ ಯಾವುವೇ ವಿಷಯಗಳು;

(ಯು) ಪ್ರಾಧಿಕಾರದ ಪ್ರಾದೇಶಿಕ ಪರಿಮಿತಿಯೊಳಗಿನ ಐತಿಹಾಸಿಕ ಮತ್ತು ಪರಂಪರೆಯ ಯಾವುದೇ ಸ್ಥಳದಲ್ಲಿ ಮಣ್ಣಿನಲ್ಲಿ ಹೂತು ಹೋಗಿವೆ ಎಂದು ನಂಬಲಾದ ಪ್ರಾಚೀನ ಸ್ಮಾರಕಗಳು ಯಾವುವಾದರೂ ಇದ್ದರೆ ಅವನ್ನು ಭೂಮಿಯಿಂದ ಹೊರಗೆ ತೆಗೆಯುವುದಕ್ಕಾಗಿ ಉತ್ಖನನ ಮತ್ತು ಪುರಾತತ್ವ ಶಾಸ್ತ್ರ ಸ್ವರೂಪದ ಅನ್ವೇಷಣೆ:

ಪರಂತು, ಈ ಖಂಡದಲ್ಲಿ ಒಳಗೊಂಡಿರುವುದು ಯಾವುದೂ ಪ್ರಾಚೀನ ಸ್ಮಾರಕಗಳು ಮತ್ತು ಪುರಾತತ್ವ ಸ್ಥಳಗಳು ಮತ್ತು ಅವಶೇಷಗಳ ಅಧಿನಿಯಮ, 1958ರ (1958ರ ಕೇಂದ್ರ ಅಧಿನಿಯಮ, 24) ಉಪಬಂಧಗಳನ್ನು ಅಧ್ಯಾರೋಹಿಸುತ್ತದೆಂದು ಭಾವಿಸತಕ್ಕದ್ದಲ್ಲ.

(2) (1)ನೇ ಉಪ-ಪ್ರಕರಣದಡಿ ಸಿದ್ಧಪಡಿಸಲಾದ ಅಭಿವೃದ್ಧಿ ಯೋಜನೆಯನ್ನು ಆಯುಕ್ತರು ಅನುಮೋದನೆಗಾಗಿ ರಾಜ್ಯ ಸರ್ಕಾರಕ್ಕೆ ಕಳುಹಿಸಿಕೊಡತಕ್ಕದ್ದು. ರಾಜ್ಯ ಸರ್ಕಾರವು, ಮಾರ್ಪಾಟುಗಳ ಸಹಿತವಾಗಿ ಅಥವಾ ಯಾವುವೇ ಮಾರ್ಪಾಟುಗಳಿಲ್ಲದೆ ಯೋಜನೆಯನ್ನು ಅನುಮೋದಿಸಬಹುದು.

(3) (2)ನೇ ಉಪ-ಪ್ರಕರಣದಡಿ ಅಭಿವೃದ್ಧಿ ಯೋಜನೆಯನ್ನು ಅನುಮೋದಿಸಿದ ತರುವಾಯ, ರಾಜ್ಯ ಸರ್ಕಾರವು ಪ್ರಾಧಿಕಾರದ ಶಿಫಾರಸುಗಳ ಮೇಲೆ ಕಾಲ ಕಾಲಕ್ಕೆ ತಾನು ಅವಶ್ಯವೆಂದು ಭಾವಿಸುವಂಥ ಮಾರ್ಪಾಟುಗಳನ್ನು ಯೋಜನೆಯಲ್ಲಿ ಮಾಡಬಹುದು.

(4) ಈ ಪ್ರಕರಣದಡಿ ರಾಜ್ಯ ಸರ್ಕಾರವು ಅನುಮೋದಿಸಿದ ಅಭಿವೃದ್ಧಿ ಯೋಜನೆಗಳನ್ನು ಕಾರ್ಯಗತ ಗೊಳಿಸುವುದಕ್ಕಾಗಿ ಕಾಮಗಾರಿಗಳನ್ನು ಕೈಗೊಳ್ಳುವ ಮತ್ತು ವೆಚ್ಚವನ್ನು ಮಾಡುವ ಅಧಿಕಾರವನ್ನು ಪ್ರಾಧಿಕಾರವು ಹೊಂದಿರತಕ್ಕದ್ದು.

**21. ಬಸವನಬಾಗೇವಾಡಿಯ ನಿರ್ವಹಣೆ.-** ರಾಜ್ಯ ಸರ್ಕಾರವು ಪ್ರಾಧಿಕಾರದ ಶಿಫಾರಸ್ಸಿನ ಮೇಲೆ ಅಥವಾ ಅನ್ಯಥಾ, ಬಸವನಬಾಗೇವಾಡಿಯ ನಿರ್ವಹಣೆಗಾಗಿ ನಿಯಮಗಳು ಮೂಲಕ ಉಪಬಂಧಗಳನ್ನು ರಚಿಸತಕ್ಕದ್ದು, ಈ ಉಪಬಂಧಗಳಲ್ಲಿ ಅದರ ಪರಂಪರೆ ತಾಣಗಳೂ ಸೇರಿದಂತೆ ಪ್ರಾಧಿಕಾರದ ಸ್ವತ್ತನ್ನು ಬಳಸಿಕೊಳ್ಳಬಹುದಾದ ರೀತಿ, ಗ್ರಾಮಕ್ಕೆ ಬರುವ ಭಕ್ತರು, ಯಾತ್ರಿಕರು, ಪ್ರವಾಸಿಗರು ಮತ್ತು ಇತರ ಸಂದರ್ಶಕರು ಬಳಸಿಕೊಳ್ಳಬಹುದಾದ ವಿವಿಧ ಸೌಲಭ್ಯಗಳಿಗಾಗಿ ಅವರಿಂದ ವಸೂಲು ಮಾಡಬಹುದಾದ ದರಗಳು, ಶುಲ್ಕಗಳು ಅಥವಾ ಇತರ ವೆಚ್ಚಗಳು ಮತ್ತು ಪರಂಪರೆ ತಾಣಗಳ ಆವರಣಕ್ಕೆ ಸಂಬಂಧಿಸಿದ ಯುಕ್ತವಾದಂಥ ಇತರ ವಿಷಯಗಳು; ಭೂ ಕಂದಾಯದ ಬಾಕಿ ಎಂಬಂತೆ ಬಾಡಿಗೆ ಅಥವಾ ನಷ್ಟಪರಿಹಾರವನ್ನು ವಸೂಲು ಮಾಡುವ ಅಧಿಕಾರ ಮುಂತಾದ ಇತರ ವಿಷಯಗಳನ್ನು ಒಳಗೊಂಡಿರತಕ್ಕದ್ದು.

**22. ಪ್ರಾಧಿಕಾರದ ಅನುಮತಿ ಇಲ್ಲದೆ ಯಾವುದೇ ಇತರ ಪ್ರಾಧಿಕಾರ ಅಥವಾ ವ್ಯಕ್ತಿಯು ಅಭಿವೃದ್ಧಿಯನ್ನು ಕೈಗೊಳ್ಳಕೂಡದು.-** (1) ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನಲ್ಲಿ ಏನೇ ಇದ್ದರೂ, ಪ್ರಾಧಿಕಾರದ ಪೂರ್ವಾನುಮತಿಯೊಂದಿಗೆ ಹೊರತು, ಬಸವನಬಾಗೇವಾಡಿಯೊಳಗೆ, ಪ್ರಾಧಿಕಾರವು ಕಾಲಕಾಲಕ್ಕೆ ಅಧಿಸೂಚನೆಯ ಮೂಲಕ ಸರ್ಕಾರಿ ರಾಜ್ಯಪತ್ರದಲ್ಲಿ ಪ್ರಕಟಣೆಯ ಮೂಲಕ ನಿರ್ದಿಷ್ಟಪಡಿಸಬಹುದಾದಂಥ ಮಾದರಿಗಳ ಯಾವುದೇ ಅಭಿವೃದ್ಧಿಯನ್ನು ಯಾವುದೇ ಪ್ರಾಧಿಕಾರ ಅಥವಾ ವ್ಯಕ್ತಿಯು ಕೈಗೊಳ್ಳತಕ್ಕದ್ದಲ್ಲ.

(2) ಬಸವನಬಾಗೇವಾಡಿಯೊಳಗೆ, (1)ನೇ ಉಪ ಪ್ರಕರಣದಲ್ಲಿ ಉಲ್ಲೇಖಿಸಿದ ಯಾವುದೇ ಅಭಿವೃದ್ಧಿ ಕೈಗೊಳ್ಳಲು, ಅಂಥ ಅಭಿವೃದ್ಧಿಗಾಗಿ ಪ್ರಾಧಿಕಾರವು ಅನುಮತಿಯನ್ನು ನೀಡಿದ್ದ ಹೊರತು, ಯಾವುದೇ ಸ್ಥಳೀಯ ಪ್ರಾಧಿಕಾರವು ಅನುಮತಿಯನ್ನು ನೀಡತಕ್ಕದ್ದಲ್ಲ.

(3) (1)ನೇ ಉಪಪ್ರಕರಣದಲ್ಲಿ ಉಲ್ಲೇಖಿಸಿದ ಅಭಿವೃದ್ಧಿಯನ್ನು ಕೈಗೊಳ್ಳಲು ಇಚ್ಛಿಸುವ ಯಾವುದೇ ಪ್ರಾಧಿಕಾರ ಅಥವಾ ವ್ಯಕ್ತಿಯು ಅಂಥ ಅಭಿವೃದ್ಧಿಯನ್ನು ಕೈಗೊಳ್ಳಲು ಅನುಮತಿಯನ್ನು ಕೋರಿ ಲಿಖಿತ ಅರ್ಜಿಯನ್ನು ಪ್ರಾಧಿಕಾರಕ್ಕೆ ಸಲ್ಲಿಸತಕ್ಕದ್ದು.

(4) ಪ್ರಾಧಿಕಾರವು, ತಾನು ಅವಶ್ಯವೆಂದು ಭಾವಿಸುವಂಥ ವಿಚಾರಣೆಯನ್ನು ನಡೆಸಿದ ತರುವಾಯ, ತಾನು ವಿಧಿಸುವುದು ಸೂಕ್ತವೆಂದು ಭಾವಿಸಬಹುದಾದಂಥ ಷರತ್ತುಗಳೊಡನೆ ಅಥವಾ ಷರತ್ತುಗಳಿಲ್ಲದೆ ಅಂಥ ಅನುಮತಿಯನ್ನು ನೀಡಬಹುದು ಅಥವಾ ಅಂಥ ಅನುಮತಿಯನ್ನು ನೀಡಲು ನಿರಾಕರಿಸಬಹುದು.

(5) (4)ನೇ ಉಪ ಪ್ರಕರಣದ ಅಡಿಯಲ್ಲಿಯ ಪ್ರಾಧಿಕಾರದ ತೀರ್ಮಾನದಿಂದ ಬಾಧಿತವಾದ ಯಾವುದೇ ಪ್ರಾಧಿಕಾರ ಅಥವಾ ವ್ಯಕ್ತಿಯು, ತೀರ್ಮಾನದ ದಿನಾಂಕದಿಂದ ಮೂವತ್ತು ದಿನಗಳೊಳಗೆ ಅಂಥ ತೀರ್ಮಾನದ ವಿರುದ್ಧ ರಾಜ್ಯ ಸರ್ಕಾರಕ್ಕೆ ಅಪೀಲನ್ನು ಸಲ್ಲಿಸಬಹುದು ಮತ್ತು ಆ ಬಗ್ಗೆ ರಾಜ್ಯಸರ್ಕಾರದ ತೀರ್ಮಾನವು ಅಂತಿಮವಾಗಿರತಕ್ಕದ್ದು:

ಪರಂತು, ಅಂಥ ಅಪೀಲನ್ನು ಸಲ್ಲಿಸುವ ಬಾಧಿತ ಪ್ರಾಧಿಕಾರವು, ಕೇಂದ್ರ ಸರ್ಕಾರದ ಆಡಳಿತ ನಿಯಂತ್ರಣದಲ್ಲಿದ್ದರೆ, ರಾಜ್ಯ ಸರ್ಕಾರವು ಕೇಂದ್ರ ಸರ್ಕಾರದೊಡನೆ ಸಮಾಲೋಚನೆ ನಡೆಸಿದ ತರುವಾಯ ಅಪೀಲನ್ನು ತೀರ್ಮಾನಿಸತಕ್ಕದ್ದು.

(6) ಯಾವೊಬ್ಬ ವ್ಯಕ್ತಿ ಅಥವಾ ಪ್ರಾಧಿಕಾರವು (5)ನೇ ಉಪ ಪ್ರಕರಣದಲ್ಲಿ ಮಾರ್ಪಡಿಸಲಾದಂತೆ (4)ನೇ ಉಪ ಪ್ರಕರಣದ ಅಡಿಯಲ್ಲಿ ನೀಡಿದ ತೀರ್ಮಾನಕ್ಕೆ ವಿರುದ್ಧವಾಗಿ ಯಾವುದೇ ಕಾರ್ಯವನ್ನು ಕೈಗೊಂಡಿದ್ದರೆ, ಅಂಥ ತೀರ್ಮಾನಕ್ಕೆ ವಿರುದ್ಧವಾಗಿ ಕೈಗೊಂಡ ಯಾವುದೇ ಅಭಿವೃದ್ಧಿಯನ್ನು ಕೆಡಹುವ, ನಾಶಪಡಿಸುವ ಅಥವಾ ತೆಗೆದುಹಾಕುವ ಅಧಿಕಾರವನ್ನು ಮತ್ತು ಅಂಥ ಕೆಡಹುವ, ನಾಶಪಡಿಸುವ ಅಥವಾ ತೆಗೆದುಹಾಕುವ ವೆಚ್ಚವನ್ನು ಸಂಬಂಧಪಟ್ಟ ವ್ಯಕ್ತಿಯಿಂದ ಅಥವಾ ಪ್ರಾಧಿಕಾರದಿಂದ ವಸೂಲ್ಮಾಡುವ ಅಧಿಕಾರವನ್ನು ಪ್ರಾಧಿಕಾರವು ಹೊಂದಿರತಕ್ಕದ್ದು.

**23. ಪ್ರವೇಶಕ್ಕೆ ಅಧಿಕಾರ.-** ಪ್ರಾಧಿಕಾರವು, ಯಾವುದೇ ಭೂಮಿ ಅಥವಾ ಕಟ್ಟಡವನ್ನು, ಕೆಲಸಗಾರರ ಸಹಾಯಪಡೆದು ಅಥವಾ ಸಹಾಯವನ್ನು ಪಡೆಯದೆ,

(ಎ) ಅಂಥ ಭೂಮಿ ಅಥವಾ ಕಟ್ಟಡಕ್ಕಾಗಿ ಯಾವುದೇ ವಿಚಾರಣೆ, ತಪಾಸಣೆ, ಅಳತೆ ಅಥವಾ ಸಮೀಕ್ಷೆ, ಅಥವಾ ಮಟ್ಟ ತೆಗೆದುಕೊಳ್ಳುವ;

(ಬಿ) ನಿರ್ಮಾಣದಲ್ಲಿರುವ ಕಾಮಗಾರಿಗಳನ್ನು ಪರೀಕ್ಷಿಸುವ ಮತ್ತು ಒಳಚರಂಡಿ ಹಾಗೂ ಚರಂಡಿಗಳ ಮಾರ್ಗವನ್ನು ಖಚಿತಪಡಿಸಿಕೊಳ್ಳುವ;

(ಸಿ) ಕೆಳ ಮಣ್ಣಿನಲ್ಲಿ ತೋಡುವ ಅಥವಾ ಕೊರೆಯುವ;

(ಡಿ) ಕಾಮಗಾರಿಯ ಗಡಿಗಳನ್ನು ಮತ್ತು ಉದ್ದೇಶಿತ ರೇಖೆಗಳನ್ನು ಹಾಕುವ;

(ಇ) ಗುರುತುಗಳನ್ನು ಇರಿಸುವ ಹಾಗೂ ಕಂದಕಗಳನ್ನು ತೋಡುವ ಮೂಲಕ ಅಂಥ ಮಟ್ಟಗಳನ್ನು, ಗಡಿಗಳನ್ನು ಮತ್ತು ರೇಖೆಗಳನ್ನು ಹಾಕುವ;

(ಎಫ್) ಯಾವುದೇ ಯೋಜನೆಯನ್ನು ಉಲ್ಲಂಘಿಸಿ ಅಥವಾ ಯಾವ ಷರತ್ತುಗಳಿಗೆ ಒಳಪಟ್ಟು ಅಂಥ ಅನುಮತಿಯನ್ನು ನೀಡಲಾಗಿತ್ತೋ ಆ ಷರತ್ತುಗಳನ್ನು ಉಲ್ಲಂಘಿಸಿ ಯಾವುದೇ ಭೂಮಿಯನ್ನು ಅಭಿವೃದ್ಧಿಪಡಿಸಲಾಗುತ್ತಿದೆಯೇ ಅಥವಾ ಅಭಿವೃದ್ಧಿಪಡಿಸಲಾಗಿದೆಯೇ ಎಂಬುದನ್ನು ಖಚಿತಪಡಿಸಿಕೊಳ್ಳುವ; ಅಥವಾ

(ಜಿ) ಈ ಅಧಿನಿಯಮದ ದಕ್ಷ ಆಡಳಿತಕ್ಕಾಗಿ ಅವಶ್ಯಕವಾದ ಇತರ ಯಾವುದೇ ಕಾರ್ಯಗಳನ್ನು ಮಾಡುವ,-

- ಉದ್ದೇಶಕ್ಕಾಗಿ ಪ್ರವೇಶಿಸಲು ಯಾವೊಬ್ಬ ವ್ಯಕ್ತಿಯನ್ನು ಪ್ರಾಧಿಕರಿಸಬಹುದು:

ಪರಂತು,

(i) ಸೂರ್ಯೋದಯ ಮತ್ತು ಸೂರ್ಯಾಸ್ತದೊಳಗಿನ ಅವಧಿಯ ಹೊರತಾಗಿ ಮತ್ತು ಅಧಿಭೋಗದಾರನಿಗೆ ಅಥವಾ ಅಲ್ಲಿ ಯಾವೊಬ್ಬ ಅಧಿಭೋಗದಾರನು ಇರದಿದ್ದರೆ ಭೂಮಿಯ ಅಥವಾ ಕಟ್ಟಡದ ಮಾಲೀಕನಿಗೆ ಸೂಕ್ತ ನೋಟೀಸನ್ನು ಕೊಡದೆ ಹಾಗೆ ಪ್ರವೇಶಿಸತಕ್ಕದ್ದಲ್ಲ;

(ii) ಮಹಿಳೆಯರು ಅಥವಾ ಮಕ್ಕಳು, ಯಾರಾದರೂ ಇದ್ದರೆ ಅವರು, ಅಂಥ ಭೂಮಿ ಅಥವಾ ಕಟ್ಟಡದಿಂದ ಹೊರ ಹೋಗಲು ಸಾಕಷ್ಟು ಅವಕಾಶವನ್ನು ಪ್ರತಿ ಸಂದರ್ಭದಲ್ಲಿಯೂ ನೀಡತಕ್ಕದ್ದು;

(iii) ಪ್ರವೇಶ ಮಾಡಿದ ಉದ್ದೇಶದ ಜರೂರು ಅವಶ್ಯಕತೆಗೆ ಸರಿಹೊಂದುವಷ್ಟರ ಮಟ್ಟಿಗೆ ಪ್ರವೇಶಿಸಿದ ಭೂಮಿ ಅಥವಾ ಕಟ್ಟಡದ ಅಧಿಭೋಗದಾರನ ಸಾಮಾಜಿಕ ಮತ್ತು ಧಾರ್ಮಿಕ ಆಚರಣೆಗೆ ಯಾವಾಗಲೂ ಸೂಕ್ತ ಗೌರವ ನೀಡತಕ್ಕದ್ದು.

**24. ಶುಲ್ಕ ವಿಧಿಸುವುದು.-** 23ನೇ ಪ್ರಕರಣದ ಅಡಿಯಲ್ಲಿ ಅನುಮತಿಗಳ ನೀಡಿಕೆಗಾಗಿ ವಿನಿಯಮಗಳ ಮೂಲಕ ನಿರ್ದಿಷ್ಟಪಡಿಸಬಹುದಾದಂಥ ದರದಲ್ಲಿ ಶುಲ್ಕವನ್ನು ವಿಧಿಸುವುದು ಪ್ರಾಧಿಕಾರಕ್ಕೆ ಕಾನೂನುಬದ್ಧವಾಗಿರತಕ್ಕದ್ದು.

**25. ಪ್ರಾಧಿಕಾರಕ್ಕೆ ರಾಜ್ಯ ಸರ್ಕಾರದ ಅಧಿಕಾರಗಳ ಪ್ರತ್ಯಾಯೋಜನೆ.-** ಕರ್ನಾಟಕ ಪ್ರಾಚೀನ ಮತ್ತು ಐತಿಹಾಸಿಕ ಸ್ಮಾರಕಗಳು ಹಾಗೂ ಪುರಾತತ್ವ ಸ್ಥಳಗಳು ಮತ್ತು ಅವಶೇಷಗಳ ಅಧಿನಿಯಮ, 1961 ರಲ್ಲಿ (1962ರ ಕರ್ನಾಟಕ ಅಧಿನಿಯಮ ಸಂಖ್ಯೆ 7) ಏನೇ ಇದ್ದರೂ, ರಾಜ್ಯ ಸರ್ಕಾರವು ಅಧಿಸೂಚನೆಯ ಮೂಲಕ ತಾನು ಚಲಾಯಿಸಬಹುದಾದ ಯಾವುವೇ ಅಧಿಕಾರಗಳನ್ನು ಪ್ರಾಧಿಕಾರಕ್ಕೆ ಪ್ರತ್ಯಾಯೋಜಿಸಬಹುದು ಮತ್ತು ಅಂಥ ಅಧಿಸೂಚನೆಯನ್ನು ಹೊರಡಿಸಿದ ತರುವಾಯ ಪ್ರಾಧಿಕಾರವು ಅಧಿಸೂಚನೆಯಲ್ಲಿ ನಿರ್ದಿಷ್ಟಪಡಿಸಬಹುದಾದಂಥ ಅಧಿಕಾರಗಳನ್ನು ಹೊಂದಿರತಕ್ಕದ್ದು ಮತ್ತು ಅಂಥ ಪ್ರಕಾರ್ಯಗಳನ್ನು ನೆರವೇರಿಸತಕ್ಕದ್ದು.

**26. ಬೀದಿಗಳು ಮುಂತಾದವುಗಳ ನಿರ್ವಹಣೆಯ ಕರ್ತವ್ಯ.-** ಕರ್ನಾಟಕ ಪಂಚಾಯತ್‌ರಾಜ್ ಅಧಿನಿಯಮ, 1993ರಲ್ಲಿ (1993ರ ಕರ್ನಾಟಕ ಅಧಿನಿಯಮ 14) ಏನೇ ಇದ್ದರೂ, ಈ ಮುಂದಿನ ವಿಷಯಗಳಿಗೆ ಸಂಬಂಧಿಸಿದಂತೆ ತಾನು ಕಾನೂನು ಬದ್ಧವಾಗಿ ಬಳಸಬಹುದಾದ ಯಾವುದೇ ಸಾಧನ ಅಥವಾ ತೆಗೆದುಕೊಳ್ಳಬಹುದಾದ ಯಾವುದೇ ಕ್ರಮದ ಮೂಲಕ ಸಮಂಜಸವಾದ ಮತ್ತು ಸಮರ್ಪಕವಾದ ಉಪಬಂಧಗಳನ್ನು ರಚಿಸುವುದು ಪ್ರಾಧಿಕಾರದ ಕರ್ತವ್ಯವಾಗಿರತಕ್ಕದ್ದು; ಎಂದರೆ:-

(ಎ) ಬಸವನಬಾಗೇವಡಿಯಲ್ಲಿ ಬೀದಿಗಳ ನಿರ್ವಹಣೆ, ದುರಸ್ತಿ ಮಾಡಿಸುವುದು, ದೀಪ ವ್ಯವಸ್ಥೆ ಮತ್ತು ಸ್ವಚ್ಛಗೊಳಿಸುವುದು; ಮತ್ತು

(ಬಿ) ಬಸವನಬಾಗೇವಾಡಿಯ ಬೀದಿಗಳ ಸಂಬಂಧದಲ್ಲಿ ಚರಂಡಿ, ನೈರ್ಮಲ್ಯ ವ್ಯವಸ್ಥೆ ಮತ್ತು ನೀರು ಸರಬರಾಜು.

**27. 1974ರ ಕರ್ನಾಟಕ ಅಧಿನಿಯಮ 32ನ್ನು ಪ್ರಾಧಿಕಾರದ ಆವರಣಗಳಿಗೆ ಅನ್ವಯಿಸುವುದು.-** (1) ರಾಜ್ಯ ಸರ್ಕಾರವು, (2)ನೇ ಉಪಪ್ರಕರಣದ ಉಪಬಂಧಗಳಿಗೆ ಒಳಪಟ್ಟು ಅಧಿಸೂಚನೆಯ ಮೂಲಕ, ಅಂಥ ಅಧಿಸೂಚನೆಯಲ್ಲಿ ನಿರ್ದಿಷ್ಟಪಡಿಸಬಹುದಾದಂಥ ದಿನಾಂಕದಿಂದ, ಕರ್ನಾಟಕ ಸಾರ್ವಜನಿಕ ಆವರಣಗಳ (ಅನಧಿಕೃತ ಅಧಿಭೋಗದಾರರನ್ನು ಹೊರಹಾಕುವ) ಅಧಿನಿಯಮ, 1974 (1974ರ ಕರ್ನಾಟಕ ಅಧಿನಿಯಮ 32)ರ ಅಧಿನಿಯಮವು ಸಾರ್ವಜನಿಕ ಆವರಣಗಳಿಗೆ ಸಂಬಂಧಿಸಿ ಅನ್ವಯಿಸುವಂತೆ ಪ್ರಾಧಿಕಾರಕ್ಕೆ ಸೇರಿದ, ಅದರಲ್ಲಿ ನಿಹಿತವಾದ ಅಥವಾ ಅದು ಗುತ್ತಿಗೆಗೆ ತೆಗೆದುಕೊಂಡ ಆವರಣಕ್ಕೆ, ಅನ್ವಯಿಸತಕ್ಕದ್ದೆಂದು ಉಪಬಂಧ ಕಲ್ಪಿಸಬಹುದು.

(2) (1)ನೇ ಉಪ ಪ್ರಕರಣದ ಅಡಿಯಲ್ಲಿ ಅಧಿಸೂಚನೆಯನ್ನು ಹೊರಡಿಸಿದ ತರುವಾಯ, ಮೇಲ್ಕಂಡ ಅಧಿನಿಯಮವು ಮತ್ತು ಅದರಡಿ ರಚಿಸಿದ ನಿಯಮಗಳು ಈ ಮುಂದಿನ ಮಾರ್ಪಾಡುಗಳೊಡನೆ ಪ್ರಾಧಿಕಾರಕ್ಕೆ ಸೇರಿದ ಆವರಣಗಳಿಗೆ ಅನ್ವಯವಾಗತಕ್ಕದ್ದು, ಎಂದರೆ,-

(ಎ) ರಾಜ್ಯ ಸರ್ಕಾರವು, ತಾನು ಸೂಕ್ತವೆಂದು ಭಾವಿಸುವಂತೆ ರಾಜ್ಯ ಸರ್ಕಾರದ ಅಥವಾ ಪ್ರಾಧಿಕಾರದ ಒಬ್ಬ ಅಧಿಕಾರಿಯನ್ನು ಮೇಲ್ಕಂಡ ಅಧಿನಿಯಮದ ಉದ್ದೇಶಗಳಿಗಾಗಿ ಸಕ್ಷಮ ಅಧಿಕಾರಿ ಎಂದು ನೇಮಿಸಬಹುದು;

(ಬಿ) ಆ ಅಧಿನಿಯಮದಲ್ಲಿ ಮತ್ತು ಆ ನಿಯಮಗಳಲ್ಲಿ ``ಸಾರ್ವಜನಿಕ ಆವರಣ'' ಕ್ಕೆ ಮಾಡಿದ ಉಲ್ಲೇಖಗಳು ಪ್ರಾಧಿಕಾರದ ಆವರಣಗಳಿಗೆ ಮಾಡಿದ ಉಲ್ಲೇಖಗಳೆಂದು ಭಾವಿಸತಕ್ಕದ್ದು ಮತ್ತು ಆ ಅಧಿನಿಯಮದ 6, 7, 8, 14, 15, 16 ಮತ್ತು 17ನೇ ಪ್ರಕರಣಗಳಲ್ಲಿ ``ರಾಜ್ಯ ಸರ್ಕಾರ'' ಕ್ಕೆ ಮಾಡಿದ ಉಲ್ಲೇಖಗಳನ್ನು, ಪ್ರಾಧಿಕಾರಕ್ಕೆ ಮಾಡಿದ ಉಲ್ಲೇಖಗಳೆಂದು ಭಾವಿಸತಕ್ಕದ್ದು.

**28. ಪ್ರವಾಸೋದ್ಯಮಕ್ಕೆ ಮತ್ತು ಯಾತ್ರೆ ಕೈಗೊಳ್ಳುವುದಕ್ಕೆ ಪ್ರಾಧಿಕಾರವು ಉತ್ತೇಜಿಸುವುದು.-** ಈ ಪಾರಂಪರಿಕ ತಾಣಗಳಿಗೆ ಸಾಕಷ್ಟು ಪ್ರಚಾರವನ್ನು ನೀಡಲು ಸಾಂಸ್ಕೃತಿಕ, ಚಾರಿತ್ರಿಕ ಮತ್ತು ಯಾತ್ರಿಕ ಪ್ರವಾಸೋದ್ಯಮವನ್ನು ಉತ್ತೇಜಿಸುವುದಕ್ಕಾಗಿ ಪ್ರಾಧಿಕಾರವು ಕಾರ್ಯಕ್ರಮಗಳನ್ನು ಮತ್ತು ಕಾರ್ಯಚಟುವಟಿಕೆಗಳನ್ನು ವ್ಯವಸ್ಥೆ ಮಾಡಬಹುದು. ಅಂಥ ಕಾರ್ಯಕ್ರಮಗಳು ಈ ಮುಂದಿನವುಗಳನ್ನು ಒಳಗೊಂಡಿರತಕ್ಕದ್ದು:-

(ಎ) ಬಸವ ಜಯಂತಿ ಉತ್ಸವ

(ಬಿ) ವಚನ ಸಾಹಿತ್ಯೋತ್ಸವ

(ಸಿ) ಕಲಾ ಪ್ರದರ್ಶನಗಳು ಮತ್ತು ಮಾರಾಟ

(ಡಿ) ಸಮ್ಮೇಳನಗಳು, ವಿಚಾರಗೋಷ್ಠಿಗಳು, ಕಾರ್ಯಾಗಾರಗಳು

(ಇ) ವಾರ್ಷಿಕ ಜಾತ್ರೆಗಳು ಮತ್ತು ವಿಶೇಷ ಸ್ವರೂಪದ ಹಬ್ಬಗಳು

**29. ಅಧಿಕಾರಗಳ ಪ್ರತ್ಯಾಯೋಜನೆ.-** (1) 43ನೇ ಪ್ರಕರಣದಡಿ ನಿಯಮಗಳನ್ನು ರಚಿಸುವ ಅಧಿಕಾರವನ್ನು ಹೊರತುಪಡಿಸಿ ರಾಜ್ಯ ಸರ್ಕಾರವು ಅಧಿಸೂಚನೆಯ ಮೂಲಕ ಈ ಅಧಿನಿಯಮದಡಿ ಅಥವಾ ಅಧಿನಿಯಮದ ಮೂಲಕ ಅದಕ್ಕೆ ಪ್ರದತ್ತವಾದ ಯಾವುವೇ ಅಧಿಕಾರಗಳನ್ನು, ಯಾವುದೇ ಪ್ರಾಧಿಕಾರಕ್ಕೆ ಪ್ರತ್ಯಾಯೋಜಿಸಬಹುದು.

(2) 44ನೇ ಪ್ರಕರಣದಡಿಯ ವಿನಿಯಮ ರಚನಾಧಿಕಾರವನ್ನು ಹೊರತುಪಡಿಸಿ, ಪ್ರಾಧಿಕಾರವು ವಿನಿಯಮಗಳ ಮೂಲಕ, ಈ ಅಧಿನಿಯಮದಡಿ ಅಥವಾ ಅಧಿನಿಯಮದ ಮೂಲಕ ಅದಕ್ಕೆ ಪ್ರದತ್ತವಾದ ಯಾವುವೇ ಅಧಿಕಾರಗಳನ್ನು ಆಯುಕ್ತರಿಗೆ ಅಥವಾ ಪ್ರಾಧಿಕಾರದ ಇತರ ಅಧಿಕಾರಿಗಳಿಗೆ ಪ್ರತ್ಯಾಯೋಜಿಸಬಹುದು.

## ಅಧ್ಯಾಯ - IV

## ಹಣಕಾಸು ಮತ್ತು ಸ್ವತ್ತು

**30. ಪ್ರಾಧಿಕಾರದ ನಿಧಿ.-** (1) ಬಸವನಬಾಗೇವಾಡಿ ಅಭಿವೃದ್ಧಿ ಪ್ರಾಧಿಕಾರ ನಿಧಿಯೆಂದು ಕರೆಯಲಾಗುವ ಒಂದು ನಿಧಿಯು ಇರತಕ್ಕದ್ದು.

(2) ಸದರಿ ನಿಧಿಗೆ,-

(i) ಕೇಂದ್ರ ಸರ್ಕಾರ, ರಾಜ್ಯ ಸರ್ಕಾರ, ಯಾವುದೇ ಸ್ಥಳೀಯ ಪ್ರಾಧಿಕಾರ ಅಥವಾ ನಿಗಮಿತವಾದ ಇಲ್ಲವೇ ನಿಗಮಿತವಲ್ಲದ ಯಾವುದೇ ನಿಕಾಯ ಅಥವಾ ಯಾವೊಬ್ಬ ವ್ಯಕ್ತಿಯು ನೀಡಿದ ಎಲ್ಲ ಅನುದಾನಗಳು, ಧನ ಸಹಾಯ, ದೇಣಿಗೆಗಳು ಮತ್ತು ದಾನಗಳನ್ನು;

(ii) ಪ್ರಾಧಿಕಾರವು ಸಾಲ ಪಡೆದ ಮೊಬಲಗನ್ನು; ಮತ್ತು

(iii) ಯಾವುದೇ ಮೂಲದಿಂದಾಗಲೀ, ಪ್ರಾಧಿಕಾರವು ಅಥವಾ ಪ್ರಾಧಿಕಾರದ ಪರವಾಗಿ ಪಡೆದುಕೊಂಡ ಇತರ ಎಲ್ಲ ಮೊತ್ತಗಳನ್ನು,

-ಜಮೆ ಮಾಡತಕ್ಕದ್ದು.

(3) ರಾಜ್ಯ ಸರ್ಕಾರವು ಅನ್ಯಥಾ ನಿರ್ದೇಶಿಸಿದ ಹೊರತು, ನಿಧಿಗೆ ಜಮೆಮಾಡಲಾದ ಎಲ್ಲ ಹಣವನ್ನು ಯಾವುದೇ ಅನುಸೂಚಿತ ಬ್ಯಾಂಕಿನಲ್ಲಿ ಅಥವಾ ರಾಜ್ಯ ಸರ್ಕಾರದ ಖಜಾನೆಯಲ್ಲಿ ಇರಿಸತಕ್ಕದ್ದು.

(4) ಪ್ರಾಧಿಕಾರದ ಆಯುಕ್ತರಿಗೆ ಮತ್ತು ಇತರ ಅಧಿಕಾರಿಗಳಿಗೆ ಮತ್ತು ನೌಕರರಿಗೆ ಸಂದಾಯ ಮಾಡಬೇಕಾದ ವೇತನಗಳು ಮತ್ತು ಭತ್ಯೆಗಳು ಮತ್ತು ನಿವೃತ್ತಿವೇತನವೇನಾದರೂ ಇದ್ದಲ್ಲಿ, ಅದನ್ನೂ ಒಳಗೊಂಡಂತೆ ಪ್ರಾಧಿಕಾರದ ಆಡಳಿತಾತ್ಮಕ ವೆಚ್ಚಗಳನ್ನು ಪ್ರಾಧಿಕಾರದ ನಿಧಿಯಿಂದ ಭರಿಸತಕ್ಕದ್ದು.

**31. ನಿಧಿಯ ಬಳಕೆ.-** ನಿಧಿಯನ್ನು ಮತ್ತು ಪ್ರಾಧಿಕಾರವು ಹೊಂದಿರುವ ಅಥವಾ ಅದರಲ್ಲಿ ನಿಹಿತವಾಗಿರುವ ಎಲ್ಲ ಸ್ವತ್ತನ್ನು ಈ ಅಧಿನಿಯಮದ ಉದ್ದೇಶಗಳನ್ನು ನೆರವೇರಿಸುವುದಕ್ಕಾಗಿ ಬಳಸಿಕೊಳ್ಳತಕ್ಕದ್ದು.

**32. ಸರ್ಕಾರದಿಂದ ಅನುದಾನ.-** ರಾಜ್ಯ ಸರ್ಕಾರವು ಪ್ರತಿ ವರ್ಷವೂ ಪ್ರಾಧಿಕಾರಕ್ಕೆ, ಪ್ರಾಧಿಕಾರವು ತನ್ನದೇ ಸಂಪನ್ಮೂಲಗಳಿಂದ ಸ್ವಯಂ ನಿರ್ವಹಣೆ ಮಾಡಿಕೊಳ್ಳುವ ಹಂತವನ್ನು ತಲುಪುವವರೆಗೆ, ಅದರ ಆಡಳಿತಾತ್ಮಕ ವೆಚ್ಚಗಳಿಗೆ ಸಮನಾದ ಮೊತ್ತವನ್ನು ಅನುದಾನದ ರೂಪದಲ್ಲಿ ನೀಡತಕ್ಕದ್ದು.

**33. ಪ್ರಾಧಿಕಾರದ ಆಯವ್ಯಯ.-** (1) ಪ್ರಾಧಿಕಾರವು, ಪ್ರತಿ ವರ್ಷವೂ ನಿಯಮಿಸಬಹುದಾದಂಥ ದಿನಾಂಕಕ್ಕೆ ಮೊದಲು ಮತ್ತು ಅಂಥ ನಮೂನೆಯಲ್ಲಿ, ಮುಂಬರುವ ಏಪ್ರಿಲ್ ಒಂದನೆಯ ದಿನಾಂಕದಂದು ಪ್ರಾರಂಭವಾಗುವ ಹಣಕಾಸು ವರ್ಷಕ್ಕಾಗಿ ತನ್ನ ಆದಾಯ ಮತ್ತು ವೆಚ್ಚದ ಆಯವ್ಯಯ ಅಂದಾಜನ್ನು ಸಿದ್ಧಪಡಿಸತಕ್ಕದ್ದು ಮತ್ತು ರಾಜ್ಯ ಸರ್ಕಾರಕ್ಕೆ ಮಂಜೂರಾತಿಗಾಗಿ ಕಳುಹಿಸತಕ್ಕದ್ದು. ಪ್ರಾಧಿಕಾರವು ಅವಶ್ಯವಾದರೆ, ಯಾವುದೇ ಹಣಕಾಸು ವರ್ಷದ ಅವಧಿಯಲ್ಲಿ ಪೂರಕ ಆಯವ್ಯಯ ಅಂದಾಜುಗಳನ್ನು ಸಹ ಸಿದ್ಧಪಡಿಸಬಹುದು.

(2) ರಾಜ್ಯ ಸರ್ಕಾರವು, ಈ ಆಯವ್ಯಯ ಅಂದಾಜುಗಳನ್ನು ಮತ್ತು ಪೂರಕ ಬಜೆಟ್ ಅಂದಾಜುಗಳನ್ನು, ಅವುಗಳಲ್ಲಿ ಮಾರ್ಪಾಟುಗಳನ್ನು ಮಾಡಿ ಅಥವಾ ಮಾಡದೆ ಅನುಮೋದಿಸತಕ್ಕದ್ದು.

(3) ಅತ್ಯಂತ ತುರ್ತು ಸಂದರ್ಭಗಳಲ್ಲಿ, ಆಯುಕ್ತರು ಒಂದು ಹಣಕಾಸು ವರ್ಷದಲ್ಲಿ ಐದು ಲಕ್ಷ ರೂಪಾಯಿಗಳಿಗೆ ಮೀರದಂತೆ ವೆಚ್ಚವನ್ನು, ಅಂಥ ವೆಚ್ಚವನ್ನು (2)ನೇ ಉಪ-ಪ್ರಕರಣದಡಿ ರಾಜ್ಯ ಸರ್ಕಾರವು ಅನುಮೋದಿಸಿದ ವಾರ್ಷಿಕ ಅಥವಾ ಪೂರಕ ಆಯವ್ಯಯ ಅಂದಾಜಿನಲ್ಲಿ ಸೇರಿಸಿಲ್ಲದಿದ್ದಾಗ್ಯೂ, ಮಾಡಲು ಸಕ್ಷಮರಾಗಿರತಕ್ಕದ್ದು.

(4) ಆಯುಕ್ತರು, ಒಂದು ಬಾರಿಗೆ, ಒಂದು ಲಕ್ಷ ರೂಪಾಯಿಗಳ ಗರಿಷ್ಠ ಮಿತಿಗೆ ಒಳಪಟ್ಟು, ವೆಚ್ಚದ ಒಂದು ಘಟಕದಿಂದ ಇನ್ನೊಂದು ಘಟಕಕ್ಕೆ ನಿಧಿಗಳ ಪುನರ್‌ವಿನಿಯೋಗ ಮಾಡುವ ಅಧಿಕಾರವನ್ನು ಹೊಂದಿರತಕ್ಕದ್ದು.

**34. ಲೆಕ್ಕ ಪತ್ರಗಳು ಮತ್ತು ಲೆಕ್ಕಪರಿಶೋಧನೆ.-** (1) ಆಯುಕ್ತರು, ನಿಯಮಿಸಬಹುದಾದಂಥ ಲೆಕ್ಕಪತ್ರಗಳ ಪುಸ್ತಕಗಳನ್ನು ಮತ್ತು ಇತರ ರಿಜಿಸ್ಟರುಗಳನ್ನು ನಿರ್ವಹಿಸಿಕೊಂಡು ಬರುವಂತೆ ಮಾಡತಕ್ಕದ್ದು ಮತ್ತು ನಿಯಮಿಸಲಾದ ವಿಧಾನದಲ್ಲಿ ವಾರ್ಷಿಕ ಲೆಕ್ಕಪತ್ರಗಳ ತಃಖ್ತೆಯನ್ನು ತಯಾರಿಸತಕ್ಕದ್ದು.

(2) ಪ್ರಾಧಿಕಾರದ ಹಣಕಾಸು ವರ್ಷವು ಪ್ರತಿ ಕ್ಯಾಲೆಂಡರ್ ವರ್ಷದ ಏಪ್ರಿಲ್ ಒಂದನೆಯ ದಿನಾಂಕದಂದು ಪ್ರಾರಂಭವಾಗತಕ್ಕದ್ದು ಮತ್ತು ಮುಂಬರುವ ಕ್ಯಾಲೆಂಡರ್ ವರ್ಷದ ಮಾರ್ಚ್ 31ನೇ ದಿನದಂದು ಕೊನೆಗೊಳ್ಳತಕ್ಕದ್ದು.

(3) ಪ್ರಾಧಿಕಾರದ ಲೆಕ್ಕಪತ್ರಗಳನ್ನು ರಾಜ್ಯ ಲೆಕ್ಕಪತ್ರಗಳ ಇಲಾಖೆಯ ನಿಯಂತ್ರಣಾಧಿಕಾರಿಯು ವಾರ್ಷಿಕವಾಗಿ ಲೆಕ್ಕಪರಿಶೋಧನೆ ನಡೆಸತಕ್ಕದ್ದು. ಪ್ರಾಧಿಕಾರವು ಅಥವಾ ರಾಜ್ಯ ಸರ್ಕಾರವು ಸಮವರ್ತಿ ಮತ್ತು ವಿಶೇಷ ಲೆಕ್ಕಪರಿಶೋಧನೆಗಾಗಿಯೂ ಆದೇಶಿಸಬಹುದು.

(4) ಲೆಕ್ಕಪರಿಶೋಧಕನು, ಲೆಕ್ಕಪರಿಶೋಧನೆಯ ಉದ್ದೇಶಗಳಿಗಾಗಿ, ಪ್ರಾಧಿಕಾರದ ಎಲ್ಲ ಲೆಕ್ಕಪತ್ರಗಳನ್ನು ಮತ್ತು ಇತರ ದಾಖಲೆಗಳನ್ನು ನೋಡುವ ಅವಕಾಶವನ್ನು ಹೊಂದಿರತಕ್ಕದ್ದು.

(5) ಪ್ರಾಧಿಕಾರವು, ಲೆಕ್ಕಪತ್ರಗಳ ವಾರ್ಷಿಕ ತಃಖ್ತೆಯನ್ನು ಮತ್ತು ಲೆಕ್ಕಪರಿಶೋಧಕನ ವರದಿಯನ್ನು ಸ್ವೀಕರಿಸಿದ ತರುವಾಯ, ಸಾಧ್ಯವಾಗಬಹುದಾದಷ್ಟು ಬೇಗನೆ, ಅದನ್ನು ತನ್ನ ಸಭೆಯಲ್ಲಿ ಪರಿಶೀಲಿಸತಕ್ಕದ್ದು ಮತ್ತು ವಾರ್ಷಿಕ ಲೆಕ್ಕಪತ್ರಗಳ ತಃಖ್ತೆ ಹಾಗೂ ಲೆಕ್ಕಪರಿಶೋಧಕನ ವರದಿಯ ಪ್ರತಿಯನ್ನು, ಲೆಕ್ಕಪರಿಶೋಧಕನು ಮಾಡಿದ ಟೀಕೆಗಳೇನಾದರೂ ಇದ್ದಲ್ಲಿ, ಅದಕ್ಕೆ ನೀಡಿದ ತನ್ನ ವಿವರಣೆ ಮತ್ತು ಲೆಕ್ಕಪರಿಶೋಧಕನು ಸೂಚಿಸಿದ ಅಕ್ರಮತೆಗಳು ಅಥವಾ ಲೋಪದೋಷಗಳೇನಾದರೂ ಇದ್ದಲ್ಲಿ, ಅವುಗಳ ಪರಿಹಾರೋಪಾಯಕ್ಕಾಗಿ ಪ್ರಾಧಿಕಾರವು ಕೈಗೊಂಡ ಕ್ರಮದ ವಿವರಣೆಗಳ ಜೊತೆಗೆ ರಾಜ್ಯ ಸರ್ಕಾರಕ್ಕೆ ಕಳುಹಿಸತಕ್ಕದ್ದು.

(6) ರಾಜ್ಯ ಸರ್ಕಾರವು, ಲೆಕ್ಕ ಪರಿಶೋಧಕನ ವರದಿಯನ್ನು ಮತ್ತು (5) ನೇ ಉಪ-ಪ್ರಕರಣದ ಅಡಿಯಲ್ಲಿ ತನಗೆ ಸಲ್ಲಿಸಲಾದ ಇತರ ದಸ್ತಾವೇಜುಗಳನ್ನು ಪರಿಶೀಲಿಸಿದ ನಂತರ, ಪ್ರಾಧಿಕಾರಕ್ಕೆ, ಅದು ಸೂಕ್ತವೆಂದು ಭಾವಿಸುವಂಥ ನಿರ್ದೇಶನಗಳನ್ನು ನೀಡಬಹುದು ಮತ್ತು ಪ್ರಾಧಿಕಾರವು ಅಂಥ ನಿರ್ದೇಶನಗಳನ್ನು ಪಾಲಿಸತಕ್ಕದ್ದು.

**35. ವರದಿಗಳು.-** (1) ಪ್ರಾಧಿಕಾರವು, ಪ್ರತಿಯೊಂದು ಹಣಕಾಸು ವರ್ಷಕ್ಕಾಗಿ, ತನ್ನ ಕಾರ್ಯನಿರ್ವಹಣೆ ಬಗ್ಗೆ ವಾರ್ಷಿಕ ವರದಿಯೊಂದನ್ನು ತಯಾರಿಸತಕ್ಕದ್ದು ಮತ್ತು 34ನೇ ಪ್ರಕರಣದ ಅಡಿಯ ಇತರ ವರದಿಗಳೊಂದಿಗೆ ಅದನ್ನು ರಾಜ್ಯ ಸರ್ಕಾರಕ್ಕೆ ಸಲ್ಲಿಸತಕ್ಕದ್ದು.

(2) ಪ್ರಾಧಿಕಾರವು, ನಿಯಮಿಸಬಹುದಾದಂಥ ದಿನಾಂಕಕ್ಕಿಂತ ಮೊದಲು, ಅಂಥ ನಮೂನೆಯಲ್ಲಿ ಮತ್ತು ಅಂಥ ಅವಧಿಯ ಅಂತರದಲ್ಲಿ, ನಿಯಮಿಸಲಾದ ವರದಿಗಳನ್ನು ರಾಜ್ಯ ಸರ್ಕಾರಕ್ಕೆ ಸಲ್ಲಿಸತಕ್ಕದ್ದು.

## ಅಧ್ಯಾಯ - V

## ಸಂಕೀರ್ಣ

**36. ಪ್ರಾಧಿಕಾರವು ತನ್ನ ಅಧಿಕಾರ ವ್ಯಾಪ್ತಿಯೊಳಗಿನ ಯಾವುದೇ ಜಮೀನನ್ನು ಮಾರಾಟ ಮಾಡಕೂಡದು.-** ಪ್ರಾಧಿಕಾರವು, ಸರ್ಕಾರದ ಪೂರ್ವಾನುಮೋದನೆ ಪಡೆಯದೆ, ಯಾವುದೇ

ಉದ್ದೇಶಕ್ಕಾಗಿ ಮತ್ತು ಯಾವೊಬ್ಬ ವ್ಯಕ್ತಿಗೆ ತನ್ನ ಅಧಿಕಾರ ವ್ಯಾಪ್ತಿಯಲ್ಲಿ ಬರುವ ಯಾವುದೇ ಜಮೀನನ್ನು ಮಾರಾಟ ಮಾಡತಕ್ಕದ್ದಲ್ಲ.

**37. ಕೆಲವು ವ್ಯಕ್ತಿಗಳು ಸಾರ್ವಜನಿಕ ನೌಕರರಾಗಿರತಕ್ಕದ್ದು.-** ಪ್ರಾಧಿಕಾರದ ಎಲ್ಲ ಸದಸ್ಯರು, ಅಧಿಕಾರಿಗಳು ಮತ್ತು ನೌಕರರನ್ನು, ಅವರು ಈ ಅಧಿನಿಯಮದ ಯಾವುವೇ ಉಪಬಂಧಗಳ ಅನುಸರಣೆಯಲ್ಲಿ ಕಾರ್ಯನಿರ್ವಹಿಸುತ್ತಿರುವಾಗ ಅಥವಾ ಕಾರ್ಯ ನಿರ್ವಹಿಸುತ್ತಿರುವರೆಂದು ತಾತ್ಪರ್ಯವಾದಾಗ ಅವರನ್ನು ಭಾರತೀಯ ನ್ಯಾಯ ಸಂಹಿತೆ, 2023 (2023ರ ಕೇಂದ್ರ ಅಧಿನಿಯಮ 45)ರ 2ನೇ ಪ್ರಕರಣದ ಅರ್ಥವ್ಯಾಪ್ತಿಯೊಳಗೆ ಸಾರ್ವಜನಿಕ ನೌಕರರು ಎಂಬುದಾಗಿ ಭಾವಿಸತಕ್ಕದ್ದು.

**38. ಈ ಅಧಿನಿಯಮದ ಅಡಿ ಸದ್ಭಾವನೆಯಿಂದ ಕೈಗೊಂಡ ಕ್ರಮಕ್ಕೆ ರಕ್ಷಣೆ.-** ಈ ಅಧಿನಿಯಮದ ಅಡಿಯಲ್ಲಿ ಸದ್ಭಾವನೆಯಿಂದ ಕೈಗೊಂಡ ಅಥವಾ ಕೈಗೊಳ್ಳಲು ಉದ್ದೇಶಿಸಿದ ಯಾವುದೇ ಕೃತ್ಯಕ್ಕಾಗಿ, ಯಾವೊಬ್ಬ ವ್ಯಕ್ತಿಯ ವಿರುದ್ಧ ಯಾವುದೇ ದಾವೆ, ಪ್ರಾಸಿಕ್ಯೂಷನ್ ಅಥವಾ ಇತರೆ ಕಾನೂನು ವ್ಯವಹರಣೆಗಳನ್ನು ಹೂಡಲು ಅವಕಾಶವಿರತಕ್ಕದ್ದಲ್ಲ.

**39. ಕರ್ತವ್ಯ ನಿರ್ವಹಣೆಯಲ್ಲಿ ಲೋಪ.-** (1) ಈ ಅಧಿನಿಯಮದಿಂದ ಅಥವಾ ಅದರ ಅಡಿಯಲ್ಲಿ ವಿಧಿಸಲಾದ ಯಾವುದೇ ಕರ್ತವ್ಯದ ನಿರ್ವಹಣೆಯನ್ನು ಪ್ರಾಧಿಕಾರವು ಮಾಡಿಲ್ಲ ಎಂದು ರಾಜ್ಯ ಸರ್ಕಾರಕ್ಕೆ ಮನವರಿಕೆಯಾದರೆ, ಆ ಕರ್ತವ್ಯದ ನಿರ್ವಹಣೆಗಾಗಿ ಅದು ಒಂದು ಅವಧಿಯನ್ನು ನಿಗದಿಪಡಿಸತಕ್ಕದ್ದು.

(2) ಕರ್ತವ್ಯ ನಿರ್ವಹಣೆಗಾಗಿ ಹಾಗೆ ನಿಗದಿಪಡಿಸಿದ ಅವಧಿಯೊಳಗೆ ಅಂಥ ಕರ್ತವ್ಯ ನಿರ್ವಹಣೆ ಮಾಡುವಲ್ಲಿ ಪ್ರಾಧಿಕಾರವು ವಿಫಲವಾಗಿದೆ ಅಥವಾ ನಿರ್ಲಕ್ಷ್ಯ ತೋರಿದೆ ಎಂದು ರಾಜ್ಯ ಸರ್ಕಾರವು ಅಭಿಪ್ರಾಯಪಟ್ಟರೆ, 4ನೇ ಪ್ರಕರಣದಲ್ಲಿ ಏನೇ ಇದ್ದರೂ, ಪ್ರಾಧಿಕಾರವನ್ನು ರದ್ದುಗೊಳಿಸುವುದು ಮತ್ತು ಅದನ್ನು ನಿಗದಿತ ರೀತಿಯಲ್ಲಿ ಪುನಃ ರಚಿಸುವುದು ರಾಜ್ಯ ಸರ್ಕಾರಕ್ಕೆ ಕಾನೂನುಸಮ್ಮತವಾಗಿರತಕ್ಕದ್ದು.

(3) ಪ್ರಾಧಿಕಾರವನ್ನು ರದ್ದುಪಡಿಸಿದ ತರುವಾಯ ಮತ್ತು ಅದನ್ನು ಪುನಾರಚಿಸುವವರೆಗೆ ಈ ಅಧಿನಿಯಮದ ಅಡಿಯಲ್ಲಿನ ಪ್ರಾಧಿಕಾರದ ಅಧಿಕಾರಗಳು, ಕರ್ತವ್ಯಗಳು ಮತ್ತು ಪ್ರಕಾರ್ಯಗಳನ್ನು ರಾಜ್ಯ ಸರ್ಕಾರ ಅಥವಾ ಈ ಉದ್ದೇಶಕ್ಕಾಗಿ ರಾಜ್ಯ ಸರ್ಕಾರವು ನೇಮಕ ಮಾಡಬಹುದಾದಂಥ ಅಧಿಕಾರಿ ಅಥವಾ ಅಧಿಕಾರಿಗಳು ನಿರ್ವಹಿಸತಕ್ಕದ್ದು.

**40. ಪ್ರಾಧಿಕಾರದ ವಿಘಟನೆ.-** (1) ರಾಜ್ಯ ಸರ್ಕಾರವು, ಅಧಿಸೂಚನೆಯ ಮೂಲಕ, ಆ ಅಧಿಸೂಚನೆಯಲ್ಲಿ ನಿರ್ದಿಷ್ಟಪಡಿಸಬಹುದಾದ ದಿನಾಂಕದಿಂದ ಜಾರಿಗೆ ಬರುವಂತೆ, ಪ್ರಾಧಿಕಾರವು ವಿಘಟಿತವಾಗತಕ್ಕದ್ದೆಂದು ಘೋಷಿಸಬಹುದು:

ಪರಂತು, ಅಂಥ ಯಾವುದೇ ಘೋಷಣೆಯನ್ನು, ಆ ಅಭಿಪ್ರಾಯದ ಒಂದು ನಿರ್ಣಯವನ್ನು ರಾಜ್ಯ ವಿಧಾನಮಂಡಲದ ಉಭಯ ಸದನಗಳ ಮುಂದೆ ಮಂಡಿಸಿ ಅವುಗಳು ಅದನ್ನು ಅನುಮೋದಿಸಿದ ಹೊರತು, ರಾಜ್ಯ ಸರ್ಕಾರವು ಮಾಡತಕ್ಕದ್ದಲ್ಲ.

(2) (1)ನೇ ಉಪ-ಪ್ರಕರಣದ ಅಡಿಯಲ್ಲಿನ ಅಧಿಸೂಚನೆಯಲ್ಲಿ ನಿರ್ದಿಷ್ಟಪಡಿಸಿದ ದಿನಾಂಕದಿಂದ ಪರಿಣಾಮಕಾರಿಯಾಗುವಂತೆ,-

(ಎ) ಪ್ರಾಧಿಕಾರದಲ್ಲಿ ನಿಹಿತವಾದ ಮತ್ತು ಅದರಿಂದ ವಸೂಲಾಗತಕ್ಕ ಎಲ್ಲ ಸ್ವತ್ತುಗಳು, ನಿಧಿಗಳು ಮತ್ತು ಬಾಕಿಗಳು ರಾಜ್ಯ ಸರ್ಕಾರದಲ್ಲಿ ನಿಹಿತವಾಗತಕ್ಕದ್ದು ಮತ್ತು ಅದು ವಸೂಲಿ ಮಾಡಬಹುದಾಗಿರತಕ್ಕದ್ದು.

(ಬಿ) ಪ್ರಾಧಿಕಾರದ ವಿರುದ್ಧ ಜಾರಿಮಾಡಬಹುದಾದ ಎಲ್ಲ ಹೊಣೆಗಳು, ರಾಜ್ಯ ಸರ್ಕಾರದಲ್ಲಿ ನಿಹಿತವಾದ ಮತ್ತು ಅದರಿಂದ ವಸೂಲಿಯಾದ ಸ್ವತ್ತು, ನಿಧಿ ಮತ್ತು ಬಾಕಿಗಳಷ್ಟರ ಮಟ್ಟಿಗೆ ರಾಜ್ಯ ಸರ್ಕಾರದ ವಿರುದ್ಧ ಜಾರಿಯಾಗಬಹುದಾಗಿರತಕ್ಕದ್ದು.

**41. ರಾಜ್ಯ ಸರ್ಕಾರದ ನಿಯಂತ್ರಣ.-** (1) ಪ್ರಾಧಿಕಾರದ ಎಲ್ಲ ಕಾರ್ಯ ಚಟುವಟಿಕೆಗಳು ಮತ್ತು ವ್ಯವಹಾರಗಳ ಮೇಲೆ ರಾಜ್ಯ ಸರ್ಕಾರವು ಸಾಮಾನ್ಯ ಆಡಳಿತಾತ್ಮಕ ನಿಯಂತ್ರಣ ಮತ್ತು ಅಧೀಕ್ಷಣೆ ಹೊಂದಿರತಕ್ಕದ್ದು.

(2) ರಾಜ್ಯ ಸರ್ಕಾರವು, ಪ್ರಾಧಿಕಾರದ ಆಯುಕ್ತರ ಅಥವಾ ಪ್ರಾಧಿಕಾರದ ಅಧೀನದ ಯಾವೊಬ್ಬ ಅಧಿಕಾರಿಯ ಯಾವುವೇ ವ್ಯವಹರಣೆಗಳ ದಾಖಲೆಗಳನ್ನು, ಅಂಥ ವ್ಯವಹರಣೆಗಳ ಸರಿಯಾಗಿರುವಿಕೆ, ಕಾನೂನು ಬದ್ಧತೆ ಅಥವಾ ಔಚಿತ್ಯಗಳ ಬಗ್ಗೆ ತಾನು ಮನದಟ್ಟು ಮಾಡಿಕೊಳ್ಳುವ ಉದ್ದೇಶಕ್ಕಾಗಿ ತರಿಸಿಕೊಳ್ಳಬಹುದು ಮತ್ತು ಅವುಗಳ ಬಗ್ಗೆ ತಾನು ಸೂಕ್ತವೆಂದು ಭಾವಿಸಿದಂಥ ಆದೇಶಗಳನ್ನು ಹೊರಡಿಸಬಹುದು.

**42. ನಿರ್ದೇಶನಗಳನ್ನು ನೀಡುವುದಕ್ಕೆ ರಾಜ್ಯ ಸರ್ಕಾರದ ಅಧಿಕಾರ.-** ರಾಜ್ಯ ಸರ್ಕಾರವು, ಈ ಅಧಿನಿಯಮದ ಉದ್ದೇಶಗಳನ್ನು ಕಾರ್ಯಗತಗೊಳಿಸುವುದಕ್ಕಾಗಿ ತಾನು ಅವಶ್ಯಕ ಮತ್ತು ಸಮಯೋಚಿತವೆಂದು ಅಭಿಪ್ರಾಯ ಪಡುವಂಥ ನಿರ್ದೇಶನಗಳನ್ನು ಪ್ರಾಧಿಕಾರಕ್ಕೆ ಕೊಡಬಹುದು ಮತ್ತು ಅಂಥ ನಿರ್ದೇಶನಗಳನ್ನು ಪಾಲಿಸುವುದು ಪ್ರಾಧಿಕಾರದ ಕರ್ತವ್ಯವಾಗಿರತಕ್ಕದ್ದು.

**43. ನಿಯಮಗಳ ರಚನಾಧಿಕಾರ.-** (1) ಈ ಅಧಿನಿಯಮದ ಉದ್ದೇಶಗಳನ್ನು ಕಾರ್ಯಗತಗೊಳಿಸುವುದಕ್ಕಾಗಿ ರಾಜ್ಯ ಸರ್ಕಾರವು, ಅಧಿಸೂಚನೆಯ ಮೂಲಕ, ನಿಯಮಗಳನ್ನು ರಚಿಸಬಹುದು.

(2) ಈ ಅಧಿನಿಯಮದ ಅಡಿಯಲ್ಲಿ ರಚಿಸಲಾದ ಪ್ರತಿಯೊಂದು ನಿಯಮವನ್ನು ಅಥವಾ ಅಧಿಸೂಚನೆಯನ್ನು ಅದನ್ನು ರಚಿಸಿದ ತರುವಾಯ, ಆದಷ್ಟು ಬೇಗನೆ, ರಾಜ್ಯ ವಿಧಾನಮಂಡಲದ ಪ್ರತಿಯೊಂದು ಸದನದ ಮುಂದೆ, ಅದು ಅಧಿವೇಶನದಲ್ಲಿರುವಾಗ, ಒಂದು ಅಧಿವೇಶನದಲ್ಲಿ ಅಥವಾ ಎರಡು ಅಥವಾ ಹೆಚ್ಚಿನ ನಿರಂತರ ಅಧಿವೇಶನಗಳಲ್ಲಿ ಅಡಕವಾಗಬಹುದಾದ ಒಟ್ಟು ಮೂವತ್ತು ದಿನಗಳ ಅವಧಿಯವರೆಗೆ ಮಂಡಿಸತಕ್ಕದ್ದು ಮತ್ತು ಮೇಲೆ ಹೇಳಿದ ಅಧಿವೇಶನಗಳ ಅಥವಾ ನಿರಂತರ ಅಧಿವೇಶನಗಳ ನಿಕಟ ತರುವಾಯದ ಅಧಿವೇಶನದ ಮುಕ್ತಾಯಕ್ಕೆ ಮುಂಚೆ ಆ ನಿಯಮದಲ್ಲಿ ಅಥವಾ ಅಧಿಸೂಚನೆಯಲ್ಲಿ ಯಾವುದೇ ಮಾರ್ಪಾಟನ್ನು ಮಾಡಬೇಕೆಂದು ಎರಡೂ ಸದನಗಳೂ ಒಪ್ಪಿದರೆ ಅಥವಾ ಆ ನಿಯಮವನ್ನು ಅಥವಾ ಅಧಿಸೂಚನೆಯನ್ನು ಮಾಡಕೂಡದೆಂದು ಎರಡೂ ಸದನಗಳೂ ಒಪ್ಪಿದರೆ ಆ ನಿಯಮವು ಅಥವಾ ಅಧಿಸೂಚನೆಯು ಸಂದರ್ಭಾನುಸಾರ ಅಂಥ ಮಾರ್ಪಾಟಾದ ರೂಪದಲ್ಲಿ ಮಾತ್ರ ಆ ಮಾರ್ಪಾಟನ್ನು ಅಥವಾ ರದ್ದತಿಯನ್ನು ಅಧಿಸೂಚಿಸಿದ ದಿನಾಂಕದಿಂದ ಪರಿಣಾಮಕಾರಿಯಾಗತಕ್ಕದ್ದು ಅಥವಾ ಯಾವುದೇ ಪರಿಣಾಮ ಹೊಂದಿರತಕ್ಕದ್ದಲ್ಲ; ಆದಾಗ್ಯೂ ಅಂಥ ಯಾವುದೇ ಮಾರ್ಪಾಟು ಅಥವಾ ರದ್ದತಿಯು ಆ ನಿಯಮದ ಅಥವಾ ಅಧಿಸೂಚನೆಯ ಮೇರೆಗೆ ಹಿಂದೆ ಮಾಡಿದ ಯಾವುದೇ ಕಾರ್ಯದ ಮಾನ್ಯತೆಗೆ ಬಾಧಕವಾಗತಕ್ಕದ್ದಲ್ಲ.

**44. ವಿನಿಯಮಗಳ ರಚನಾಧಿಕಾರ.-** ಪ್ರಾಧಿಕಾರವು, ಈ ಅಧಿನಿಯಮದ ಉಪಬಂಧಗಳಿಗೆ ಮತ್ತು 45ನೇ ಪ್ರಕರಣದ ಮೇರೆಗೆ ರಚಿಸಲಾದ ನಿಯಮಗಳಿಗೆ ಒಳಪಟ್ಟು ಮತ್ತು ರಾಜ್ಯ ಸರ್ಕಾರದ ಪೂರ್ವ ಮಂಜೂರಾತಿಯೊಂದಿಗೆ ಈ ಅಧಿನಿಯಮದ ಉದ್ದೇಶಗಳನ್ನು ಕಾರ್ಯಗತಗೊಳಿಸುವುದಕ್ಕೆ ಅಧಿಸೂಚನೆಯ ಮೂಲಕ ವಿನಿಯಮಗಳನ್ನು ರಚಿಸಬಹುದು.

**45. ತೊಂದರೆಗಳನ್ನು ನಿವಾರಿಸುವ ಅಧಿಕಾರ**.- (1) ಈ ಅಧಿನಿಯಮದ ಉಪಬಂಧಗಳನ್ನು ಜಾರಿಗೊಳಿಸುವಲ್ಲಿ ಏನಾದರೂ ತೊಂದರೆ ಉದ್ಭವಿಸಿದರೆ, ರಾಜ್ಯ ಸರ್ಕಾರವು ಆದೇಶದ ಮೂಲಕ ತೊಂದರೆಯನ್ನು ನಿವಾರಿಸುವುದಕ್ಕಾಗಿ ಅವಶ್ಯಕವೆಂದು ಕಂಡುಬರುವ ಈ ಅಧಿನಿಯಮದ ಉಪಬಂಧಗಳಿಗೆ ಅಸಂಗತವಲ್ಲದ ಏನನ್ನಾದರೂ ಅಗತ್ಯಪಡಿಸಬಹುದಾದ ಸಂದರ್ಭದಂತೆ ಉಪಬಂಧಗಳನ್ನು ಸರ್ಕಾರಿ ರಾಜ್ಯಪತ್ರದಲ್ಲಿ ಪ್ರಕಟಿಸಬಹುದು:

ಪರಂತು, ಈ ಅಧಿನಿಯಮದ ಪ್ರಾರಂಭದ ದಿನಾಂಕದಿಂದ ಎರಡು ವರ್ಷಗಳ ಅವಧಿಯ ಮುಕ್ತಾಯದ ತರುವಾಯ ಯಾವುದೇ ಅಂಥ ಆದೇಶವನ್ನು ಮಾಡತಕ್ಕದ್ದಲ್ಲ.

(2) ಉಪ-ಪ್ರಕರಣ (1)ರಡಿ ಮಾಡಿದ ಪ್ರತಿಯೊಂದು ಆದೇಶವನ್ನು, ಅದನ್ನು ಮಾಡಿದ ತರುವಾಯ ಸಾಧ್ಯವಾದಷ್ಟು ಬೇಗನೆ ರಾಜ್ಯ ವಿಧಾನಮಂಡಲದ ಪ್ರತಿಯೊಂದು ಸದನದ ಮುಂದೆ ಮಂಡಿಸತಕ್ಕದ್ದು.

## ಅನುಸೂಚಿ

(2ನೇ ಪ್ರಕರಣದ (ಜೆ) ಖಂಡವನ್ನು ನೋಡಿ)

## ಬಸವನಬಾಗೇವಾಡಿಯಲ್ಲಿರುವ ಪರಂಪರೆಯ ತಾಣಗಳು ಮತ್ತು ಸ್ಮಾರಕಗಳು

| |
|---|
| (1) ಬಸವನಬಾಗೇವಾಡಿ |
| (2) ಹೊರಮಟ್ಟಿ ಗುಡ್ಡ |
| (3) ಇಂಗಳೇಶ್ವರ |
| (4) ಮಸಬಿನಾಳ |
| (5) ದೇಗಿನಾಳ |
| (6) ದೇವರಹಿಪ್ಪರಗಿ |
| (7) ಶಿವನಾಗಿ |
| (8) ತಂಗಡಗಿ |

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

**ಜಿ. ಶ್ರೀಧರ್**

ಸರ್ಕಾರದ ಕಾರ್ಯದರ್ಶಿ,
ಸಂಸದೀಯ ವ್ಯವಹಾರಗಳು ಮತ್ತು
ಶಾಸನ ರಚನೆ ಇಲಾಖೆ.

## 2025 ರ ಕರ್ನಾಟಕ ಅಧಿನಿಯಮ ಸಂಖ್ಯೆ: 75

(2025ರ ಸೆಪ್ಟೆಂಬರ್ ತಿಂಗಳ 26ನೇ ದಿನಾಂಕದಂದು ಕರ್ನಾಟಕ ರಾಜ್ಯಪತ್ರದ ವಿಶೇಷ ಸಂಚಿಕೆಯಲ್ಲಿ ಮೊದಲು ಪ್ರಕಟವಾಗಿದೆ)

## ಬಸವನಬಾಗೇವಾಡಿ ಅಭಿವೃದ್ಧಿ ಪ್ರಾಧಿಕಾರ (ತಿದ್ದುಪಡಿ) ಅಧಿನಿಯಮ, 2025

(2025ರ ಸೆಪ್ಟೆಂಬರ್ ತಿಂಗಳ 25ನೇ ದಿನಾಂಕದಂದು ರಾಜ್ಯ ಪಾಲರಿಂದ ಒಪ್ಪಿಗೆಯನ್ನು ಪಡೆಯಲಾಗಿದೆ)

ಬಸವನಬಾಗೇವಾಡಿ ಅಭಿವೃದ್ಧಿ ಪ್ರಾಧಿಕಾರ ಅಧಿನಿಯಮ 2024ನ್ನು ತಿದ್ದುಪಡಿ ಮಾಡಲು ಒಂದು ಅಧಿನಿಯಮ.

ಇಲ್ಲಿ ಇನ್ನುಮುಂದೆ ಕಂಡುಬರುವ ಉದ್ದೇಶಗಳಿಗಾಗಿ ಬಸವನಬಾಗೇವಾಡಿ ಅಭಿವೃದ್ಧಿ ಪ್ರಾಧಿಕಾರ ಅಧಿನಿಯಮ, 2024 (2025ರ ಕರ್ನಾಟಕ ಅಧಿನಿಯಮ ಸಂ.4)ನ್ನು, ತಿದ್ದುಪಡಿ ಮಾಡುವುದು ಯುಕ್ತವಾಗಿರುವುದರಿಂದ;

ಇದು ಭಾರತ ಗಣರಾಜ್ಯದ ಎಪ್ಪತ್ತಾರನೇ ವರ್ಷದಲ್ಲಿ ಕರ್ನಾಟಕ ರಾಜ್ಯ ವಿಧಾನ ಮಂಡಲದಿಂದ ಈ ಮುಂದಿನಂತೆ ಅಧಿನಿಯಮಿತವಾಗಲಿ:-

**1. ಸಂಕ್ಷಿಪ್ತ ಹೆಸರು ಮತ್ತು ಪ್ರಾರಂಭ.-** (1) ಈ ಅಧಿನಿಯಮವನ್ನು ಬಸವನಬಾಗೇವಾಡಿ ಅಭಿವೃದ್ಧಿ ಪ್ರಾಧಿಕಾರ (ತಿದ್ದುಪಡಿ) ಅಧಿನಿಯಮ, 2025 ಎಂದು ಕರೆಯತಕ್ಕದ್ದು.

(2) ಇದು ಈ ಕೂಡಲೇ ಜಾರಿಗೆ ಬರತಕ್ಕದ್ದು.

**2. ಪ್ರಕರಣ 3ರ ತಿದ್ದುಪಡಿ.-** ಬಸವನಬಾಗೇವಾಡಿ ಅಭಿವೃದ್ಧಿ ಪ್ರಾಧಿಕಾರ ಅಧಿನಿಯಮ, 2024 (2025ರ ಕರ್ನಾಟಕ ಅಧಿನಿಯಮ ಸಂ. 4)ರ, 3ನೇ ಪ್ರಕರಣದ (4)ನೇ ಉಪಪ್ರಕರಣದಲ್ಲಿರುವ, (ಜಿ) ಖಂಡದ ತರುವಾಯ ಈ ಮುಂದಿನದನ್ನು ಸೇರಿಸತಕ್ಕದ್ದು, ಎಂದರೆ:-

**"**(ಜಿ-1) ಪ್ರಾಧಿಕಾರದ ಪರಿಮಿತಿಯೊಳಗೆ ಬರುವ ಪ್ರಾದೇಶಿಕ ಮತಕ್ಷೇತ್ರದಲ್ಲಿ ಬಸವನ ಬಾಗೇವಾಡಿಯನ್ನು ಭಾಗಶಃ ಅಥವಾ ಸಂಪೂರ್ಣವಾಗಿ ಪ್ರತಿನಿಧಿಸುವ ಕರ್ನಾಟಕ ರಾಜ್ಯ ವಿಧಾನ ಪರಿಷತ್ತಿನ ಸದ್ಯಸ್ಯರು - ಪದನಿಮಿತ್ತ ಸದಸ್ಯರು **"**.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

**ಜಿ. ಶ್ರೀಧರ್**
ಸರ್ಕಾರದ ಕಾರ್ಯದರ್ಶಿ,
ಸಂಸದೀಯ ವ್ಯವಹಾರಗಳು ಮತ್ತು
ಶಾಸನ ರಚನೆ ಇಲಾಖೆ.